ಕನ್ನಡ ದಿನಪತ್ರಿಕೆ
05 ಮೇ । ರವಿವಾರ
05 MAY 2024

ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 67 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

ತನ್ನ ದುರಾಡಳಿತದಿಂದ ಕೇವಲ 10 ತಿಂಗಳುಗಳಲ್ಲಿ ಕರ್ನಾಟಕವನ್ನು ಹಾಳುಗೆಡುವಿದ ಕಾಂಗ್ರೆಸ್

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಹಾಗೂ ಬಿಜೆಪಿಯ ವರಿಷ್ಠ ಕಟ್ಟಾಳು ಅಮಿತ್ ಶಾ ಅವರು ಲೋಕಸಭೆ ಚುನಾವಣಾ ಪ್ರಚಾರದ ಭಾಗವಾಗಿ ಶುಕ್ರವಾರ ಕರ್ನಾಟಕದ ಚಿಕ್ಕೋಡಿಯಲ್ಲಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿ, ಕೇವಲ 10 ತಿಂಗಳಲ್ಲಿ ಕರ್ನಾಟಕ ರಾಜ್ಯವನ್ನು ಕಾಂಗ್ರೆಸ್ ದನನೀಯ ಸ್ಥಿತಿಗೆ ತಂದಿದೆ ಎಂದು ಹೇಳಿದರು.

ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಕೇವಲ 10 ತಿಂಗಳಲ್ಲಿ, ಕಾಂಗ್ರೆಸ್ ನೇತೃತ್ವದ ಸರ್ಕಾರವು ಕರ್ನಾಟಕ ರಾಜ್ಯವನ್ನು ಪ್ರಕ್ಷುಬ್ಧತೆ ಮತ್ತು ಅವ್ಯವಸ್ಥೆಯತ್ತ ಕೊಂಡೊಯ್ಯಿತು.

ಅಧಿಕಾರಕ್ಕೆ ಬಂದ ಮೇಲೆ ರೈತರಿಗೆ ನೀಡುತ್ತಿದ್ದ ರೂ. 4,000 ಧನಸಹಾಯವನ್ನು ಏಕಾಏಕಿ ಸ್ಥಗಿತಗೊಳಿಸಿರುವುದು ಕೃಷಿ ಸಮುದಾಯದ ಬಗ್ಗೆ ಕಾಂಗ್ರೆಸ್ ಪಕ್ಷಕ್ಕಿರುವ ನಿರ್ಲಕ್ಷ್ಯವನ್ನು ಪ್ರತಿಬಿಂಬಿಸುತ್ತದೆ. ಇಂತಹ ದೂರದೃಷ್ಟಿಯಿಲ್ಲದ ನೀತಿಗಳು ಸಾಮಾನ್ಯ ಜನರಿಗೆ ದ್ರೋಹ ಮಾಡುವುದಲ್ಲದೆ, ಆಡಳಿತದಲ್ಲಿ ಕಾಂಗ್ರೆಸ್ನ ಬದ್ಧತೆ ಮತ್ತು ದೂರದೃಷ್ಟಿಯ ಕೊರತೆಯನ್ನು ಎತ್ತಿ ತೋರಿಸುತ್ತದೆ.

ಇದಲ್ಲದೆ, 'ಲವ್ ಜಿಹಾದ್' ವಿಷಯದ ಸುತ್ತಲಿನ ಸವಾಲುಗಳ ಸಂಕೇತವಾದ ನೇಹಾ ಪ್ರಕರಣಕ್ಕೆ ನ್ಯಾಯ ನೀಡಲು

ಸಾಧ್ಯವಾಗದಿರುವುದು ಕಾಂಗ್ರೆಸ್ನ ಅಸಮರ್ಥತೆಯನ್ನು ಬಹಿರಂಗಪಡಿಸುತ್ತದೆ. ನೇಹಾ ಅವರಂತಹ ಸಂತ್ರಸ್ತರಿಗೆ ಪಕ್ಷವು ನ್ಯಾಯವನ್ನು ನೀಡಲು ಸಾಧ್ಯವಾಗದಿದ್ದರೆ, ಅಂತಹ ಸೂಕ್ಷ್ಮ ಪ್ರಕರಣಗಳನ್ನು ಕೇಂದ್ರೀಯ ತನಿಖಾ ದಳಕ್ಕೆ ವಹಿಸುವುದು ಮಾತ್ರ ಕಾರ್ಯಸಾಧುವಾದ ಪರಿಹಾರವಾಗಿದೆ. ಇಂತಹ ನಿರ್ಣಾಯಕ ವಿಷಯಗಳನ್ನು ಪರಿಹರಿಸುವಲ್ಲಿನ ಕಾಂಗ್ರೆಸ್ನ ವೈಫಲ್ಯವು ಅದರ ವಿಶ್ವಾಸಾರ್ಹತೆ ಮತ್ತು ಸಾರ್ವಜನಿಕ ನಂಬಿಕೆ ಕುರಿತು ಪ್ರಶ್ನೆ ಹುಟ್ಟು ಹಾಕುತ್ತದೆ.

ಹಲವಾರು ಪ್ರಯತ್ನಗಳ ಹೊರತಾಗಿಯೂ, ರಾಹುಲ್ ಗಾಂಧಿಯವರ ಕರ್ನಾಟಕ ರಾಜಕೀಯ ಪ್ರವೇಶ ಅಷ್ಟು ಯಶಸ್ಸನ್ನು ಪಡೆದಿಲ್ಲ. 20ಕ್ಕೂ ಹೆಚ್ಚು ಬಾರಿ ಲಾಂಚ್ ಆಗಲು ಪ್ರಯತ್ನಿಸಿದರೂ, ಲೆಕ್ಕವಿಲ್ಲದಷ್ಟು ಕಾರ್ಯಾಲಿಗಳನ್ನು ಮಾಡಿದರು, ಕಾಂಗ್ರೆಸ್ಸಿನ ಈ ಕುಡಿ ಮತದಾರರ ಪ್ರತಿಧ್ವನಿಯನ್ನು ಅರಿಯಲು ಹೆಣಗಾಡುತ್ತಲೇ ಇದೆ. ಜನರ ನಾಡಿ ಮಿಡಿತ ಅರಿಯುವಲ್ಲಿನ ಅವರ ಅಸಮರ್ಥತೆ, ಕಾಂಗ್ರೆಸ್ ನಾಯಕತ್ವದ ಬಗ್ಗೆ ಹೆಚ್ಚುತ್ತಿರುವ ಭ್ರಮನಿರಸನವನ್ನು ಎತ್ತಿ ತೋರಿಸುತ್ತದೆ. ಇದಲ್ಲದೆ, ಹಿಂಸಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ಪಕ್ಷವಾದ ಎಸ್ಡಿಪಿಐ ಜೊತೆ ಕಾಂಗ್ರೆಸ್ನ ಮೌನ ಮೈತ್ರಿಯು, ನೈತಿಕ ಸಮಗ್ರತೆ, ಕರ್ನಾಟಕದ ಶಾಂತಿ ಮತ್ತು ಸ್ಥಿರತೆಯೆಡೆಗಿನ ಪಕ್ಷದ ಬದ್ಧತೆಯ ಬಗ್ಗೆ ಗಂಭೀರ ಕಳವಳವನ್ನು ಉಂಟುಮಾಡುತ್ತದೆ. ಇಂತಹ ವಿವಾದಾತ್ಮಕ ಅಂಶಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳುವ ಮೂಲಕ ಕಾಂಗ್ರೆಸ್ ತನ್ನದೇ ಆದ ಮೌಲ್ಯಗಳನ್ನು ರಾಜಿ ಮಾಡಿಕೊಳ್ಳುವುದರ ಜೊತೆಗೆ ರಾಜ್ಯದ ಭದ್ರತೆ ಮತ್ತು ಕೋಮು ಸೌಹಾರ್ದತೆಗೆ ಧಕ್ಕೆ ತಂದಿದೆ.

ಇದಕ್ಕೆ ತದ್ವಿರುದ್ಧವಾಗಿ, ಬಿಜೆಪಿಯು ಕರ್ನಾಟಕದ ಭರವಸೆಯ ಕಿರಣವಾಗಿ ಹೊರಹೊಮ್ಮುತ್ತಿದೆ, ಅಂತರ್ಗತ ಅಭಿವೃದ್ಧಿ, ಉತ್ತಮ ಆಡಳಿತ ಮತ್ತು ಎಲ್ಲಾ ನಾಗರಿಕರ ಕಲ್ಯಾಣಕ್ಕಾಗಿ ಅಚಲವಾದ ಬದ್ಧತೆಯ ದೃಷ್ಟಿಕೋನವನ್ನು ಹೊಂದಿದೆ. ತನ್ನ ಭರವಸೆಗಳನ್ನು ಈಡೇರಿಸುವ ಮತ್ತು ಪ್ರಗತಿಯ ವಾತಾವರಣವನ್ನು ಪೋಷಿಸುವ ದಾಖಲೆಯೊಂದಿಗೆ, ತೆವಳುತ್ತಾ ಸಾಗುತ್ತಿರುವ ಕಾಂಗ್ರೆಸ್ ನೇತೃತ್ವದ ಆಡಳಿತಕ್ಕೆ ಬಿಜೆಪಿ ವಿಶ್ವಾಸಾರ್ಹ ಪರ್ಯಾಯ ಆಯ್ಕೆಯಾಗಿದೆ.

ಕರ್ನಾಟಕವು ಮತ್ತೊಂದು ನಿರ್ಣಾಯಕ ಚುನಾವಣಾ ಘಟ್ಟವನ್ನು ಸಮೀಪಿಸುತ್ತಿರುವಾಗ, ಜನರ ಮುಂದಿರುವ ಆಯ್ಕೆಯು ಸ್ಪಷ್ಟವಾಗಿದೆ: ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರ ಸಧೃಡ ನಾಯಕತ್ವಕ್ಕೆ ಮತ ಹಾಕಿ, ಸಮೃದ್ಧಿ ಮತ್ತು ಸ್ಥಿರತೆಯ ಹಾದಿಯನ್ನು ಆಯ್ಕೆ ಮಾಡಿಕೊಳ್ಳುವುದು ಅಥವಾ ಕಾಂಗ್ರೆಸ್ಸನ್ನು ಆರಿಸಿ, ಅನಿಶ್ಚಿತತೆ ಮತ್ತು ಹಿಂಜರಿತದ ಹಾದಿಯಲ್ಲಿ ಮುಂದುವರಿಯುವುದು. ಕಾಂಗ್ರೆಸ್ನ ವೈಫಲ್ಯಗಳು ಮತ್ತು ನ್ಯೂನತೆಗಳಿಗೆ ವೈರುಧ್ಯವಾಗಿ, ಕರ್ನಾಟಕದ ಉಜ್ವಲ ಭವಿಷ್ಯವನ್ನು ಬಲವಾಗಿ ಪ್ರತಿಧ್ವನಿಸುತ್ತಿರುವ ಬಿಜೆಪಿಯು, ರಾಜ್ಯದಲ್ಲಿ ಭರವಸೆ ಮತ್ತು ಪ್ರಗತಿಯ ಹೊಸ ಯುಗಕ್ಕೆ ನಾಂದಿ ಹಾಡಲಿದೆ.

ಪ್ರಧಾನಿ ಮೋದಿಯವರ ಸರ್ಕಾರವು ಯಾವುದೇ ಪ್ರತಿಕೂಲ ಪರಿಣಾಮಗಳಿಲ್ಲದೆ, ಕಾಂಗ್ರೆಸ್ನ ಭಯ ಹುಟ್ಟಿಸುವ ತಂತ್ರಗಳನ್ನು ತಳ್ಳಿ ಹಾಕಿ,370ನೇ ವಿಧಿಯನ್ನು ಯಶಸ್ವಿಯಾಗಿ ತೆಗೆದು ಹಾಕಿತು. ಇದು ಪ್ರಧಾನಿ ಮೋದಿ ಮತ್ತು ಗೃಹ ಸಚಿವ ಶಾ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ದೇಶವು ಪ್ರಗತಿಯೆಡೆಗೆ ಸಾಗುತ್ತಿರುವುದರ ನಿದರ್ಶನವಾಗಿದೆ.

ಕರ್ನಾಟಕವು ಮತ್ತೊಂದು ಚುನಾವಣಾ ಹಣಾಹಣಿಗೆ ಸಜ್ಜಾಗುತ್ತಿರುವಾಗ, ಭಾರತೀಯ ಜನತಾ ಪಕ್ಷ ಮತ್ತು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ನ ವ್ಯತಿರಿಕ್ತ ನೀತಿ ನಿರೂಪಣೆಗಳ ಮೇಲೆ ಮತ್ತೊಮ್ಮೆ ಗಮನ ಹರಿಸುವುದು ಅವಶ್ಯಕವಾಗಿದೆ. ಕಾಂಗ್ರೆಸ್ ನೇತೃತ್ವದ ಆಡಳಿತ ತಪ್ಪು ಹೆಜ್ಜೆಗಳು ಮತ್ತು ವಿವಾದಗಳ ಸರಣಿಯೊಂದಿಗೆ, ರಾಜ್ಯವನ್ನು ಹಾಳುಗೆಡುವುತ್ತಿರುವಾಗ, ಬಿಜೆಪಿಯು ಸ್ಥಿರತೆ, ಪ್ರಗತಿ ಮತ್ತು ಪರಿಣಾಮಕಾರಿ ಆಡಳಿತದ ಭರವಸೆಯ ಮೂಲಕ ದಾರಿದೀಪವಾಗಿ ಹೊರಹೊಮ್ಮುತ್ತಿದೆ.

ಹೆಚ್.ಡಿ ದೇವೇಗೌಡರ ಆರೋಗ್ಯದಲ್ಲಿ ಏರುಪೇರು

ಬೆಂಗಳೂರು: ಮಗ ಮತ್ತು ಮೊಮ್ಮಗ ಅವರ ಕೇಸ್‌ನಿಂದ ಚಿಂತೆಯಿಂದ ಮತ್ತು ವಯೋಸಹಜ ಅನಾರೋಗ್ಯದಿಂದ ಮಾಜಿ ಪ್ರಧಾನಿ ದೇವೇಗೌಡರ ಆರೋಗ್ಯದಲ್ಲಿ ಏರುಪೇರು ಉಂಟಾಗಿದೆ ಎನ್ನಲಾಗಿದೆ. ಸದ್ಯ ಅವರನ್ನು ಮನೆಯಲ್ಲೇ ಕುಟುಂಬದವರು ಹೆಚ್ಚಿನ ನಿಗ ವಹಿಸಿ ಆರೋಗ್ಯವನ್ನು ನೋಡಿಕೊಳ್ಳುತ್ತಿದ್ದಾರೆ ಎನ್ನಲಾಗಿದೆ.

ಅವರ ಆರೋಗ್ಯದ ಬಗ್ಗೆ ಹೆಣ್ಣು ಮಕ್ಕಳು ಸಂಪೂರ್ಣ ಮೇಲ್ವಿಚಾರಣೆ ಹೊತ್ತಿದ್ದಾರೆ ಎನ್ನಲಾಗಿದ್ದು, ನಿನ್ನೆ ದೇವೇಗೌಡರ ಅಳಿಯ ಹಾಗೂ ಹೃದಯ ತಜ್ಞ ಡಾ. ಸಿ.ಎನ್ ಮಂಜುನಾಥ್ ಗೌಡರ ಮನೆಗೆ ಭೇಟಿ ಆರೋಗ್ಯದ ಬಗ್ಗೆ ಗಮನ ಹರಿಸುವಂತೆ ಮತ್ತು ಸೂಕ್ತ ರೀತಿಯಲ್ಲಿ ಮೇಲ್ವಿಚಾರಣೆ ಮಾಡುವಂತೆ ತಿಳಿಸಿದ್ದಾರೆ ಎನ್ನಲಾಗಿದೆ.

ದೇವೇಗೌಡರಿಗೆ "ಟಿವಿ ನೋಡಬೇಡಿ.. ಸಂಪೂರ್ಣ ರೆಸ್ಟ್ ಮಾಡಿ" ಎಂದು ವೈದ್ಯರು ಹೇಳಿದ್ದು, ಸದ್ಯ ದೇವೇಗೌಡರು ವಿಶ್ರಾಂತಿಯಲ್ಲಿದ್ದು ಕುಟುಂಬದ ಆತ್ಮೀಯರು ಹೊರತು ಪಡಿಸಿ ಬೇರೆಯವರಿಗೆ ಅವರನ್ನು ಭೇಟಿ ಮಾಡುವುದಕ್ಕೆ ಅವಕಾಶ ನೀಡುವುದಿಲ್ಲ ಎನ್ನಲಾಗಿದೆ.

ಮಹಿಳೆ ಕಿಡ್ನಾಪ್ ಕೇಸ್ ಹೆಚ್.ಡಿ ರೇವಣ್ಣ ಅರೆಸ್ಟ್

ಬೆಂಗಳೂರು: ಮಹಿಳೆಯ ಕಿಡ್ನಾಪ್ ಕೇಸ್ನಲ್ಲಿ ಜಾಮೀನು ಅರ್ಜಿಯನ್ನು ಕೋರ್ಟ್ ವಜಾ ಮಾಡಿದ ಬೆನ್ನಲ್ಲೇ ಎಸ್‌ಐಟಿ ಅಧಿಕಾರಿಗಳು ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರನ್ನು ಅರೆಸ್ಟ್ ಮಾಡಿದ್ದಾರೆ.

ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರ ಜಾಮೀನು ಅರ್ಜಿಯನ್ನು ಕೋರ್ಟ್ ವಜಾ ಮಾಡಿದ ಬೆನ್ನಲ್ಲೇ ಎಸ್‌ಐಟಿ ಅಧಿಕಾರಿಗಳು ಮಾಜಿ ಪ್ರಧಾನಿ ದೇವೇಗೌಡರ ನಿವಾಸಕ್ಕೆ ತೆರಳಿದ್ದರು. ಹೆಚ್.ಡಿ ರೇವಣ್ಣ ದೇವೇಗೌಡರ ನಿವಾಸದಲ್ಲಿ ಇರಬಹುದು ಎಂದು ಬೆಂಗಳೂರಿನ ಪದ್ಮನಾಭನಗರದಲ್ಲಿ ಇರುವ ಮನೆಗೆ 10 ಜನ ಅಧಿಕಾರಿಗಳು ಭೇಟಿ ನೀಡಿದ್ದರು. ಕೆಲ ಸಮಯದ ಬಳಿಕ ಅಧಿಕಾರಿಗಳು ರೇವಣ್ಣರನ್ನು ಅರೆಸ್ಟ್ ಮಾಡಿದ್ದಾರೆ.

ಬೆಂಗಳೂರಿನ ಪದ್ಮನಾಭನಗರದಲ್ಲಿ ಇರುವ ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರ ನಿವಾಸಕ್ಕೆ ದೌಡಾಯಿಸಿದ್ದರು. ಮಾಜಿ ಪ್ರಧಾನಿ ದೇವೇಗೌಡ ನಿವಾಸದ ಒಳಗೆ ಅಧಿಕಾರಿಗಳನ್ನು ಬಿಟ್ಟಿಲ್ಲ. ಹೀಗಾಗಿ ಒಟ್ಟು 10 ಖಖಖಿ ಅಧಿಕಾರಿಗಳು ಬಾಗಿಲ ಬಳಿಯೆ ನಿಂತುಕೊಂಡಿದ್ದರು.

ಕಾರು ಅಪಘಾತ: ಶ್ರೀ ಗೆ ಗಂಭೀರ ಗಾಯ

ಬಾಗಲಕೋಟೆ: ಜಿಲ್ಲೆಯಲ್ಲಿ ನಡೆದಂತ ಭೀಕರ ಕಾರು ಅಪಘಾತದಲ್ಲಿ ಸಿದ್ದನಕೊಳ್ಳ ಮಠದ ಶಿವಕುಮಾರ ಸ್ವಾಮೀಜಿ ಅವರು ಗಂಭೀರವಾಗಿ ಗಾಯಗೊಂಡು, ಆಸ್ಪತ್ರೆಗೆ ದಾಖಲಾಗಿದ್ದಾರೆ. ಅವರ ಸ್ಥಿತಿ ಚಿಂತಾಜನಕ ಎಂಬುದಾಗಿ ಹೇಳಲಾಗುತ್ತಿದೆ.

ಬಾಗಲಕೋಟೆ ಜಿಲ್ಲೆಯ ಇಳಕಲ್ ತಾಲೂಕಿನ ಸುಕ್ಷೇತ್ರ ಸಿದ್ದನಕೊಳ್ಳ ಮಠದ ಶಿವಕುಮಾರಸ್ವಾಮೀಜಿ ಅವರ ಕಾರು, ಅಮಿನಗಢ ಬಳಿಯಲ್ಲಿ ಇಂದು ಟಿಪ್ಪರ್ ವಾಹನಕ್ಕೆ ಡಿಕ್ಕಿಯಾದ ಪರಿಣಾಮ, ಗಂಭೀರವಾಗಿ ಗಾಯಗೊಂಡಿರೋದಾಗಿ ತಿಳಿದು ಬಂದಿದೆ. ಶಿವಕುಮಾರಸ್ವಾಮೀಜಿಯವರ ತಲೆಗೆ ಗಂಭೀರವಾಗಿ ಪೆಟ್ಟುಬಿದ್ದಿದ್ದು, ಕೋಮಾದಲ್ಲಿ ಇದ್ದಾರೆ ಎನ್ನಲಾಗುತ್ತಿದೆ.

ಭೀಕರ ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡಿರುವಂತ ಸಿದ್ದನಕೊಳ್ಳ ಮಠದ ಶಿವಕುಮಾರ ಸ್ವಾಮೀಜಿಯವರನ್ನು ಬಾಗಲಕೋಟೆ ಜಿಲ್ಲಾಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ. ಈ ಅಪಘಾತದಲ್ಲಿ ಶಿವಕುಮಾರಸ್ವಾಮೀಜಿಯವರ ಕಾರು ಸಂಪೂರ್ಣ ನಜ್ಜುಗುಜ್ಜಾಗಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

ಪಿಡಿಓ ಲಂಚಾವತಾರಕ್ಕೆ ಬೇಸತ್ತ ಜನ

ಬೆಂಗಳೂರು: ಸರ್ಕಾರಿ ಕೆಲಸ ದೇವರ ಕೆಲಸ ಅನ್ನೋ ಮಾತು ಕೇವಲ ಗೋಡೆಗಳ ಮೇಲಿನ ಬರಹಕ್ಕೆ ಅಷ್ಟೇ ಸೀಮಿತವಾಗಿದೆ. ಸದ್ಯ ಇಲ್ಲೊಬ್ಬ ಅಧಿಕಾರಿ ದೇವಾಲಯವನ್ನೇ ಅಪವಿತ್ರ ಮಾಡಿದ್ದಾನೆ. ಕೆಲಸ ಆಗ್ಬೇಕು ಸರ್ ಎಂದು ಆತನ ಬಳಿ ಹೋದರೆ ಹಣದ ಜತೆಗೆ ಎಣ್ಣೆಗೆ ಡಿಮ್ಯಾಂಡ್ ಮಾಡುತ್ತಾನೆ. ದುಡ್ಡು, ಡ್ರಿಂಕ್ಸ್ ಮುಂದಿಟ್ಟರೆ ಸಾಕು ರೂಲ್ಸ್ ಬ್ರೇಕ್ ಮಾಡಿ ನಿಮಗೆ ಬೇಕಾದ ರೆಕಾರ್ಡ್ಸ್ ರೆಡಿಯಾಗುತ್ತಂತೆ.

ಅಂದಹಾಗೇ ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯ ಪಿಡಿಓ ಲಂಚಾವತಾರದ ಕಥೆ ಇದು. ಕಣ್ಣೂರು ಗ್ರಾಮ ಪಂಚಾಯಿತಿ ಪಿಡಿಓ ಮುನಿಚಿಕ್ಕಯ್ಯ ಎಂಬಾತನ ಲಂಚಾವತಾರಕ್ಕೆ ಜನ ಸಾಮಾನ್ಯರು ಬೇಸತ್ತು ಹೋಗಿದ್ದಾರೆ. ಲ್ಯಾಂಡ್ ಕನ್ವರ್ಷನ್ ಆಗದಿದ್ದರೂ ಲೇಔಟ್ ನಿರ್ಮಾಣಕ್ಕೆ ಅನುಮತಿ ನೀಡುತ್ತಾರೆ. ರೆವಿನ್ಯೂ ಸೈಟ್‌ಗಳ ಖಾತೆ ಮಾಡಿಕೊಳ್ಳಲು ಒಂದು ಲಕ್ಷ ರೂ. ಫಿಕ್ಸ್ ಮಾಡಿದ್ದರಂತೆ. ಅರ್ಜಿದಾರನೊಬ್ಬ ಅಕ್ರಮವಾಗಿ ನಿರ್ಮಾಣವಾಗಿದ್ದ ಲೇಔಟ್‌ನ ಕಾಮಗಾರಿ ತಡೆಯೋದಕ್ಕೆ ಅರ್ಜಿ ನೀಡಿದ್ದರು.

ನಿಮ್ಮ ಕೆಲಸ ಮುಗಿತು ಅಂದುಕೊಳ್ಳಿ.. ಆದರೆ ನನಗೆ ದುಬಾರಿ ಮದ್ಯದ ಬಾಟಲ್ ಕೊಡಿ ಎನ್ನುತ್ತಾನಂತೆ. ಈ ರೀತಿ ನೂರಾರು ಖಾತೆಯನ್ನು ಅಕ್ರಮ ಎಸಗಿದ್ದಾರೆ. ಅಕ್ರಮದ ಬಗ್ಗೆ ದೂರು ನೀಡಿದರೂ ಹಿರಿಯ ಅಧಿಕಾರಿಗಳಿಂದ ಯಾವುದೇ ಕ್ರಮ ಇಲ್ಲ ಅರ್ಜಿದಾರರು ಕಿಡಿಕಾರುತ್ತಿದ್ದಾರೆ.

ಪ್ರಜ್ವಲ್ ರೇವಣ್ಣ ಪ್ರಕರಣ: ಎಸ್‌ಐಟಿ ಅಧಿಕಾರಿಗಳ ಜತೆ ಸಿಎಂ ಮಹತ್ವದ ಸಭೆ

ಬೆಂಗಳೂರು: ಹಾಸನದ ಸಂಸದ ಪ್ರಜ್ವಲ್ ರೇವಣ್ಣ ಪ್ರಕರಣದ ತನಿಖೆಗೆ ಸಂಬಂಧಿಸಿದಂತೆ ರಚಿಸಲಾಗಿರುವ ಎಸ್‌ಐಟಿಯ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ತಮ್ಮ ಗೃಹಕಚೇರಿಯಲ್ಲಿ ಮಹತ್ವದ ಸಭೆ ನಡೆಸಿದರು.

ಪ್ರಕರಣದ ಸಂಬಂಧಪಟ್ಟಂತೆ ಇದುವರೆಗಿನ ಬೆಳವಣಿಗೆಗಳ ಬಗ್ಗೆ ಮುಖ್ಯಮಂತ್ರಿಯವರು ಅಧಿಕಾರಿಗಳಿಂದ ಮಾಹಿತಿ ಪಡೆದರು. ಪ್ರಮುಖ ಆರೋಪಿಯಾಗಿರುವ ಪ್ರಜ್ವಲ್ ರೇವಣ್ಣ ನಾಪತ್ತೆಯಾಗಿದ್ದು, ಲುಕ್‌ಔಟ್ ನೋಟಿಸ್ ಜೊತೆಗೆ ತೀವ್ರ ಶೋಧ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ವಿವರಿಸಿದರು.

ಪ್ರಜ್ವಲ್ ರೇವಣ್ಣ ಬಂಧನಕ್ಕೆ ಕೂಡಲೇ

ಕ್ರಮ ಕೈಗೊಳ್ಳಬೇಕು. ಪ್ರಕರಣದಲ್ಲಿ ಭಾಗಿಯಾದವರ ವಿರುದ್ಧ ನಿರ್ದಾಕ್ಷಿಣ್ಯ ಹಾಗೂ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಈ ವಿಚಾರದಲ್ಲಿ ನಿರ್ಲಕ್ಷ್ಯ ಹಾಗೂ ವಿಳಂಬ ಧೋರಣೆ ಸಹಿಸಲಾಗದು ಎಂದು ಮುಖ್ಯಮಂತ್ರಿಯವರು ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ.

ಸೂಕ್ತ ಕ್ರಮಗಳೊಂದಿಗೆ ಆರೋಪಿಗಳ ಬಂಧನಕ್ಕೆ ಕ್ರಮ ಕೈಗೊಳ್ಳಲಾಗುವುದು. ಸಿಬಿಐ ಸಹಕಾರದೊಂದಿಗೆ ಪ್ರಜ್ವಲ್ ರೇವಣ್ಣ ವಿರುದ್ಧ ಬ್ಲೂ ಕಾರ್ನರ್ ನೋಟಿಸ್ ಹೊರಡಿಸುವ ಸಾಧ್ಯತೆ ಇದೆ. ಇದರಿಂದ ತನಿಖೆಗೆ ವೇಗ ಸಿಗಲಿದೆ. ವಿಮಾನ ನಿಲ್ದಾಣಗಳಿಂದ ಮಾಹಿತಿ ಸಿಕ್ಕ ಕೂಡಲೇ ಬಂಧಿಸಿ ಕರೆತರುವುದಾಗಿ ಅಧಿಕಾರಿಗಳು ಸಭೆಯಲ್ಲಿ ಮುಖ್ಯಮಂತ್ರಿಯವರಿಗೆ ವಿವರಿಸಿದ್ದಾರೆ.

ಮಾಹಿತಿ ಪಡೆಯಲು ಬ್ಲೂ ಕಾರ್ನರ್ ನೋಟೀಸ್ : 196 ಸದಸ್ಯ ರಾಷ್ಟ್ರಗಳೊಂದಿಗೆ ಸಹಯೋಗ ಹೊಂದಿರುವ ಅಂತಾರಾಷ್ಟ್ರೀಯ ಪೊಲೀಸ್ ಸಂಸ್ಥೆ (ಇಂಟರ್‌ಪೋಲ್) ಹಲವಾರು ಸ್ವರೂಪದ ನೋಟೀಸ್‌ಗಳನ್ನು ಜಾರಿಗೆ ತಂದಿದೆ. ಅದರಲ್ಲಿ ಶಿಕ್ಷೆಗೆ ಒಳಗಾಗಿರುವ ತಪ್ಪಿತಸ್ಥ ಆರೋಪಿಗಳ ಸ್ಥಳ ಪತ್ತೆ ಮತ್ತು ಬಂಧನಕ್ಕಾಗಿ ರೆಡ್ ಕಾರ್ನರ್ ನೋಟೀಸ್ ಜಾರಿಗೊಳಿಸಲಾಗುತ್ತದೆ. ನಾಪತ್ತೆಯಾಗಿರುವ ಅಪ್ರಾಪ್ತರ ಸ್ಥಳ ಪತ್ತೆ ಮತ್ತು ಸ್ವಯಂ ಗುರುತನ್ನು ಹೇಳಿಕೊಳ್ಳಲು ಸಾಧ್ಯವಾಗದಿರುವವರ ಪತ್ತೆಗಾಗಿ ಎಲ್ಲೋ ಕಾರ್ನರ್ ನೋಟೀಸ್ ಹೊರಡಿಸಲಾಗುತ್ತದೆ.

ಬ್ಲೂ ಕಾರ್ನರ್ ನೋಟೀಸ್ ಅನ್ನು ವ್ಯಕ್ತಿಯ ಗುರುತು, ಸ್ಥಳ ಪತ್ತೆ ಮತ್ತು ಅಪರಾಧ ಪ್ರಕರಣಕ್ಕೆ ಸಂಬಂಧಪಟ್ಟಂತೆ ಆತನ ಚಟುವಟಿಕೆಗಳ ಹೆಚ್ಚುವರಿ ಮಾಹಿತಿಯನ್ನು ಕಲೆ ಹಾಕಲು ಹೊರಡಿಸಲಾಗುತ್ತದೆ. ಮೃತಪಟ್ಟವರ ಮಾಹಿತಿ ಸಂಗ್ರಹ ಹಾಗೂ ಗುರುತು ಪತ್ತೆಗೆ ಬ್ಲಾಕ್ ನೋಟೀಸ್ ಸೇರಿದಂತೆ ಗ್ರೀನ್, ಆರೆಂಜ್, ಪರ್ಪಲ್ ನೋಟೀಸ್‌ಗಳನ್ನು ನಿಗದಿಪಡಿಸಲಾಗಿದೆ.

ತೆರಿಗೆ ವಂಚನೆ ಆರೋಪ

ಬೆಂಗಳೂರು: ಬೆಂಗಳೂರು ಟರ್ಫ್ ಕ್ಲಬ್ (ರೇಸ್ ಕೋರ್ಸ್)ನಲ್ಲಿ ಸೂಕ್ತ ದಾಖಲೆ ಮತ್ತು ರಿಜಿಸ್ಟರ್ ನಿರ್ವಹಿಸದೆ ಅನಧಿಕೃತವಾಗಿ ಕುದುರೆ ಪಂದ್ಯಗಳಿಗೆ ಬೆಟ್ಟಿಂಗ್ ಆಯೋಜಿಸಿ ಪಂಟರ್ಗಳಿಂದ ಹಣ ಸಂಗ್ರಹಿಸಿಜಿಎಸ್ ಟಿ ಮತ್ತು ಟಿಡಿಎಸ್ ಕಟ್ಟದ ಪ್ರಕರಣವನ್ನು ರದ್ದುಗೊಳಿಸಲು ಹೈಕೋರ್ಟ್ ನಿರಾಕರಿಸಿದೆ.

ಸೂರ್ಯ ಮತ್ತು ಇತರ 25 ಬುಕ್ಕಿಗಳು ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದ ನ್ಯಾಯಮೂರ್ತಿ ಎಸ್ ವಿಶ್ವಜಿತ್ ಶೆಟ್ಟಿ, ಆರೋಪಿಗಳ ವಿರುದ ಗಂಭೀರ ಆಪಾದನೆಗಳಿವೆ, ಅವರು ಸಂಗ್ರಹಿಸಿದ ಕೋಟಿಗಟ್ಟಲೆ ಹಣವನ್ನು ಜಿಎಸ್ಟಿ ಮತ್ತು ಟಿಡಿಎಸ್ ಪಾವತಿ ಮಾಡದೆ ದ

ನ್ಯಾಯಸಮ್ಮತ, ಪಾರದರ್ಶಕ ಚುನಾವಣೆಗೆ ಸಕಲ ಸಿದ್ಧತೆ

ಸಾರ್ವಜನಿಕರು ನಿರ್ಭೀತಿಯಿಂದ ಮತಗಟ್ಟೆಗೆ ಆಗಮಿಸಿ ಮತ ಚಲಾಯಿಸಿ: ರಾಹುಲ ಶಿಂಧೆ

ಬೆಳಗಾವಿ: ಚಿಕ್ಕೋಡಿ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮತದಾನವು ಪಾರದರ್ಶಕ ಹಾಗೂ ನ್ಯಾಯಸಮ್ಮತವಾಗಿ ನಡೆಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಸಾರ್ವಜನಿಕರು ನಿರ್ಭಿತಿಯಿಂದ ಮತಗಟ್ಟೆಗೆ ಆಗಮಿಸಿ ತಮ್ಮ ಅಮೂಲ್ಯವಾದ ಮತವನ್ನು ಚಲಾಯಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಹೇಳಿದರು.

ಚಿಕ್ಕೋಡಿ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ (ಮೇ.4) ರಂದು ಜರುಗಿದ ಸುದ್ಧಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಮೇ 7 ರಂದು ಬೆಳಗ್ಗೆ 7 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ಮತದಾನ ನಡೆಯಲಿದೆ. ಸಾರ್ವಜನಿಕರು ಪ್ರಜಾತಂತ್ರದ ಮತದಾನದ ಹಬ್ಬದಲ್ಲಿ ಪಾಲ್ಗೊಳ್ಳುವಂತೆ ಕೋರಿದರು.

ಮತದಾರರ ವಿವರ:

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ 8,85,200 ಪುರುಷ, 8,76,414 ಮಹಿಳಾ ಹಾಗೂ ಇತರೆ 80 ಮತದಾರರು ಸೇರಿದಂತೆ ಒಟ್ಟು 17,61,694 ಮತದಾರರಿತ್ತಾರೆ. ನಿಪ್ಪಾಣಿ ವಿಧಾನಸಭಾ ಮತಕ್ಷೇತ್ರದಲ್ಲಿ 1,17,367 ಪುರುಷ, 1,17,396 ಮಹಿಳೆಯರು, 7 ಇತರೆ ಮತದಾರರು ಸೇರಿದಂತೆ ಒಟ್ಟು 2,34,770ಮತದಾರರಿತ್ತಾರೆ. ಚಿಕ್ಕೋಡಿ-ಸದಲಗಾ ಮತಕ್ಷೇತ್ರದಲ್ಲಿ 1,16,100 ಪುರುಷ, 1,16,856 ಮಹಿಳಾ, ಇತರೆ 14 ಸೇರಿದಂತೆ ಒಟ್ಟು 2,32,970 ಮತದಾರರು, ಅಥಣಿ ಮತಕ್ಷೇತ್ರದಲ್ಲಿ 1,21,426 ಪುರುಷ, 1,18,216 ಮಹಿಳಾ, ಇತರೆ 4 ಒಟ್ಟು 2,39,646 ಮತದಾರರು, ಕಾಗವಾಡ ಮತಕ್ಷೇತ್ರದಲ್ಲಿ 1,03,609 ಪುರುಷ, 1,01,535 ಮಹಿಳಾ, 08 ಇತರೆ ಸೇರಿದಂತೆ ಒಟ್ಟು 2,05,152 ಮತದಾರರು, ಕುಡಚಿ ಮತಕ್ಷೇತ್ರದಲ್ಲಿ 1,03,985 ಪುರುಷ, 1,00,092 ಮಹಿಳಾ, 18 ಇತರೆ ಸೇರಿದಂತೆ 2,04,095 ಮತದಾರರು, ರಾಯಬಾಗ ಮತಕ್ಷೇತ್ರದಲ್ಲಿ 1,12,724 ಪುರುಷ, 1,08,591 ಮಹಿಳಾ, ಇತರೆ 10 ಸೇರಿದಂತೆ ಒಟ್ಟು 2,21,325 ಮತದಾರರು, ಹುಕ್ಕೇರಿ ಮತಕ್ಷೇತ್ರದಲ್ಲಿ 1,06,816 ಪುರುಷ, 1,08,387 ಮಹಿಳಾ, 10 ಇತರೆ ಸೇರಿದಂತೆ ಒಟ್ಟು 2,15,213 ಮತದಾರರು, ಯಮಕನಮರಡಿ ಮತಕ್ಷೇತ್ರದಲ್ಲಿ 1,03,173 ಪುರುಷ, 1,05,341 ಮಹಿಳಾ ಹಾಗೂ 9 ಇತರೆ ಮತದಾರರು ಸೇರಿದಂತೆ ಒಟ್ಟು 2,08,523 ಮತದಾರರು ತಮ್ಮ ಹಕ್ಕನ್ನು ಚಲಾಯಿಸಲಿದ್ದಾರೆ.

ಮತಗಟ್ಟೆಗಳ ವಿವರ:

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ ಒಟ್ಟು 1896 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ನಿಪ್ಪಾಣಿ ವಿಧಾನ ಮತಕ್ಷೇತ್ರದಲಿಲ 248, ಚಿಕ್ಕೋಡಿ-ಸದಲಗಾ ವಿಧಾನಸಭಾ ಮತಕ್ಷೇತ್ರದಲ್ಲಿ 246, ಅಥಣಿ 260, ಕಾಗವಾಡ 219, ರಾಯಬಾಗ 232, ಹುಕ್ಕೇರಿ 224 ಹಾಗೂ

ಯಮಕನಮರಡಿ ವಿಧಾನಸಭಾ ಮತಕ್ಷೇತ್ರದಲ್ಲಿ 236 ಮತಗಟ್ಟೆಗಳನ್ನು ಸ್ಥಾಪಿಸಲಾಗಿರುತ್ತದೆ. ಒಟ್ಟು 1896 ಮತಗಟ್ಟೆಗಳ ಪೈಕಿ 257 ಮತಗಟ್ಟೆಗಳನ್ನು ಕ್ರಿಟಿಕಲ್, 104 ವಲ್ನರೇಬಲ್ ಮತಗಟ್ಟೆಗಳನ್ನಾಗಿ ಗುರುತಿಸಲಾಗಿದೆ. 948 ಮತಗಟ್ಟೆಗಳಿಗೆ ವೆಬಕಾಸ್ಟಿಂಗ್ ಹಾಗೂ 18 ಮತಗಟ್ಟೆಗಳಲ್ಲಿ ವೀಡಿಯೋಗ್ರಾಫಿ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ.

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ 1896 ಮತಗಟ್ಟೆಗಳಿಗೆ ಶೇ.10 ರಷ್ಟು ಹೆಚ್ಚುವರಿ ಸಿಬ್ಬಂದಿ ಸೇರಿದಂತೆ ಒಟ್ಟು 8792 ಮತಗಟ್ಟೆ ಅಧಿಕಾರಿ/ಸಿಬ್ಬಂದಿಗಳನ್ನು ನಿಯೋಜಿಸಿ ಮತಗಟ್ಟೆ ಅಧಿಕಾರಿಗಳಿಗೆ ಎರಡು ಹಂತಗಳಲ್ಲಿ ತರಬೇತಿಯನ್ನು ನೀಡಲಾಗಿರುತ್ತದೆ. ಇದರ ಜೊತೆಗೆ 304 ಮೈಕ್ರೋ ಆಬ್ಸರ್ವರಗಳನ್ನು ನಿಯೋಜಿಸಲಾಗಿರುತ್ತದೆ. ಮತಗಟ್ಟೆ ಅಧಿಕಾರಿ, ಸಿಬ್ಬಂದಿಗಳು ನಿಯೋಜಿತ ಮತಗಟ್ಟೆಗಳಿಗೆ ತೆರಳಲು 408 ಮಾರ್ಗಗಳನ್ನು ಗುರುತಿಸಲಾಗಿದ್ದು, 275 ಬಸ, 28 ಜೀಪ್ ಹಾಗೂ 117 ಇತರೆ ವಾಹನಗಳನ್ನು ಬಳಸಿಕೊಳ್ಳಲಾಗುತ್ತಿದೆ.

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ 40 ಸಖಿ ಮತಗಟ್ಟೆ, ವಿಕಲಚೇತನ ಮತಗಟ್ಟೆ ಅಧಿಕಾರಿಗಳು ಸಿಬ್ಬಂದಿಗಳು ಕಾರ್ಯನಿರ್ವಹಿಸುವ 8, ಯುವ ಮತಗಟ್ಟೆ ಅಧಿಕಾರಿ, ಸಿಬ್ಬಂದಿಗಳು ಕಾರ್ಯನಿರ್ವಹಿಸುವ 8 ಹಾಗೂ ಅರಣ್ಯದ ಮಹತ್ವ ಸಾರುವ 8 ಮಾದರಿ ಮತಗಟ್ಟೆಗಳನ್ನು ಸ್ಥಾಪಿಸಲಾಗಿರುತ್ತದೆ.

ಮತದಾನ ಪೂರ್ವ 48 ಗಂಟೆಗಳ ಮಾರ್ಗಸೂಚಿಗಳು:

ಮೇ.7 ರಂದು ಜರುಗಲಿರುವ ಮತದಾನಕ್ಕೂ ಮುನ್ನ 48 ಗಂಟೆಗಳ ಅವಧಿಯಲ್ಲಿ ಎಲ್ಲ ರೀತಿಯ ಬಹಿರಂಗ ಚುನಾವಣಾ ಪ್ರಚಾರ ಸಭೆ ಹಾಗೂ ಧ್ವನಿ ವರ್ಧಕಗಳ ಬಳಕೆಯನ್ನು ನಿಷೇಧಿಸಲಾಗಿರುತ್ತದೆ. ಕ್ಷೇತ್ರದ ಮತದಾರರಲ್ಲದ ತಾರಾ ಪ್ರಚಾರಕರು, ಇತರರು ಕ್ಷೇತ್ರದಿಂದ ಹೊರ ಹೊಗಬೇಕು ಮತಗಟ್ಟೆಗಳ 100 ಮೀ. ಪರಿಮಿತಿಯೊಳಗೆ ನಿಷೇಧಾಜ್ಞೆ ಜಾರಿಯಿದ್ದು ಚುನಾವಣಾ ಪ್ರಚಾರ ಅಥವಾ ಆಯುಧಗಳನ್ನು ಕೊಂಡೊಯ್ಯುವದನ್ನು ನಿಷೇಧಿಸಲಾಗಿರುತ್ತದೆ. ಈ ಕುರಿತು ಎಫ್.ಎಸ್.ಟಿ. ತಂಡಗಳು ದಿನದ ಇಪ್ಪತ್ತನಾಲ್ಕು ಗಂಟೆಗಳ ಕಾಲ ನಿರಂತರ ನಿಗಾವಹಿಸುತ್ತಿರುತ್ತವೆ. ಚುನಾವಣೆ ಅಕ್ರಮ ಅಥವಾ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಕಂಡುಬಂದಲ್ಲಿ ಸಾರ್ವಜನಿಕರು ಸಹಾಯವಾಣಿ ಕೇಂದ್ರಗಳಿಗೆ ದೂರು ನೀಡಿದಲ್ಲಿ ಕೂಡಲೇ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಹಾಯವಾಣಿ ಕೇಂದ್ರಗಳು: ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ಜರುಗಿಸಲು ಚಿಕ್ಕೋಡಿ ಲೋಕಸಭ ಮತಕ್ಷೇತ್ರಕ್ಕೆ ಸಂಬಂಧಿಸಿದಂತೆ ಸಹಾಯವಾಣಿಗಳನ್ನು ತೆರೆಯಲಾಗಿದ್ದು ಚಿಕ್ಕೋಡಿ ಲೋಕಸಭಾ ಚುನಾವಣಾಧಿಕಾರಿಗಳ ಕಾರ್ಯಾಲಯ 08338-272132, 272130, 8088824266 ನಿಪ್ಪಾಣಿ-08338-220030, ಚಿಕೋಡಿ-ಸದಲಗಾ- 08338-272130, ಅಥಣಿ-08289-469501, ಕಾಗವಾಡ- 08339-264555, ಕುಡಚಿ-9845986105, ರಾಯಬಾಗ-8867519106, ಹುಕ್ಕೇರಿ-08333-265036, ಯಮಕನಮರಡಿ-08333-200308 ಹಾಗೂ ಚುನಾವಣಾ ಸಹಾಯವಾಣಿ 1950 ಗೆ ಕರೆ ಮಾಡಬಹುದಾಗಿದೆ.

ಸಾಮಾಜಿಕ ಜಾಲತಾಣಗಳ ಮೂಲಕ ಹರಿದಾಡುವ ಸುಳ್ಳು ಸುದ್ದಿಗಳಿಗೆ ಕಿವಿಗೊಡದೆ ಯಾವುದೇ ಸಂದೇಹ ಅಥವಾ ಸಮಸ್ಯೆಗಳು ಇದ್ದಲ್ಲಿ ಸಹಾಯವಾಣಿ ಕೇಂದ್ರಗಳಿಗೆ ದೂರುಗಳನ್ನು ಸಲ್ಲಿಸುವಂತೆ ಹಾಗೂ ಪ್ರತಿಯೊಬ್ಬ ಅರ್ಹ ಮತದಾರರು ಮತದಾನದ ದಿನದಂದು ತಪ್ಪದೇ ಮತಗಟ್ಟೆಗಳಿಗೆ ಆಗಮಿಸಿ ತಮ್ಮ ಮತದಾನದ ಹಕ್ಕನ್ನು ಚಲಾಯಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಹೆಚ್ಚುವರಿ ಪೋಲಿಸ ಅಧೀಕ್ಷಕ ಆರ್.ಜಿ. ಬಸರಗಿ ಮಾತನಾಡಿ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಶಾಂತ ಹಾಗೂ ನ್ಯಾಯಸಮ್ಮತ ಚುನಾವಣೆಗಾಗಿ ಅಗತ್ಯದ ಭದ್ರತೆಗಾಗಿ ಒಟ್ಟು 2949 ಪೋಲಿಸ್ ಅಧಿಕಾರಿ ಸಿಬ್ಬಂದಿಗಳನ್ನು ನಿಯೋಜಿಸಲಾಗಿರುತ್ತದೆ. ಇವರ ಜೊತೆಗೆ ಸಿ.ಎ.ಪಿ.ಎಫ್ ನ 5 ತಂಡಗಳು ಹಾಗೂ 4 ಕೆ.ಎಸ್.ಆರ್.ಪಿ. ತುಕುಡಿಗಳನ್ನು ನಿಯೋಜಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಪತ್ರಿಕಾ ಗೋಷ್ಠಿಯಲ್ಲಿ ಅಬಕಾರಿ ಆಯುಕ್ತ ಟಿ. ಪ್ರಶಾಂತಕುಮಾರ ಉಪಸ್ಥಿತರಿದ್ದರು.

ದ್ವಿತೀಯ ಪಿಯು ವಾರ್ಷಿಕ ಪರೀಕ್ಷೆ -2

ರಸಾಯನ ಶಾಸ್ತ್ರ, ಭೂಗೋಳ ಶಾಸ್ತ್ರ, ಮನ ಶಾಸ್ತ್ರ ಮತ್ತು ಮೂಲ ಗಣಿತ ವಿಷಯದಲ್ಲಿ ಒಟ್ಟು 1,849 ವಿದ್ಯಾರ್ಥಿಗಳು ಹಾಜರು; 279 ವಿದ್ಯಾರ್ಥಿಗಳು ಗೈರು ಹಾಜರು

ಧಾರವಾಡ: ಮೇ 4 ರಂದು ಬೆಳಿಗ್ಗೆ ಜಿಲ್ಲೆಯಲ್ಲಿ ನಡೆದ ದ್ವಿತೀಯ ಪಿಯು ವಾರ್ಷಿಕ ಪರೀಕ್ಷೆ -2 ರ ರಸಾಯನಶಾಸ್ತ್ರ ವಿಷಯದ ಪರೀಕ್ಷೆಗೆ ಜಿಲ್ಲೆಯ 12 ಪರೀಕ್ಷಾ ಕೇಂದ್ರಗಳಲ್ಲಿ ನೋಂದಾಯಿತರಾಗಿದ್ದ ಒಟ್ಟು 1,985 ವಿದ್ಯಾರ್ಥಿಗಳ ಪೈಕಿ 1,731 ವಿದ್ಯಾರ್ಥಿಗಳು ಹಾಜರಾಗಿದ್ದರು. ಮತ್ತು 254 ವಿದ್ಯಾರ್ಥಿಗಳು ಗೈರು ಹಾಜರು ಉಳಿದಿದ್ದಾರೆ.

ಭೂಗೋಳ ಶಾಸ್ತ್ರ ವಿಷಯಕ್ಕೆ ನೋಂದಾಯಿತರಾಗಿದ್ದ ಒಟ್ಟು 136 ವಿದ್ಯಾರ್ಥಿಗಳ ಪೈಕಿ 112 ವಿದ್ಯಾರ್ಥಿಗಳು ಹಾಜರಾಗಿದ್ದರು. ಮತ್ತು 24 ವಿದ್ಯಾರ್ಥಿಗಳು ಗೈರು ಹಾಜರು ಉಳಿದಿದ್ದಾರೆ. ಮನಶಾಸ್ತ್ರ ವಿಷಯಕ್ಕೆ ನೋಂದಾಯಿತರಾಗಿದ್ದ ಇಬ್ಬರು ವಿದ್ಯಾರ್ಥಿಗಳು ಹಾಜರಾಗಿದ್ದಾರೆ.

ಮೂಲ ಗಣಿತ ವಿಷಯಕ್ಕೆ ನೋಂದಾಯಿತರಾಗಿದ್ದ ಒಟ್ಟು 5 ವಿದ್ಯಾರ್ಥಿಗಳ ಪೈಕಿ 4 ವಿದ್ಯಾರ್ಥಿಗಳು ಹಾಜರಾಗಿದ್ದರು, ಮತ್ತು ಒಬ್ಬ ವಿದ್ಯಾರ್ಥಿಯು ಗೈರು ಹಾಜರು ಉಳಿದಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸುರೇಶ್ ಕೆ.ಪಿ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸವದತ್ತಿಯಲ್ಲಿ ಕಾಂಗ್ರೆಸ್ ಅಬ್ಬರದ ಪ್ರಚಾರ

ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಶಾಸಕ ವಿಶ್ವಾಸ್ ವೈದ್ಯ ರ್ಯಾಲಿ

ಸವದತ್ತಿ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ಶನಿವಾರ ಸವದತ್ತಿ ಪಟ್ಟಣದಲ್ಲಿ ಸುಮಾರು 4 ಕಿಲೋಮೀಟರ್ ಮೆರವಣಿಗೆ ಕೈಗೊಳ್ಳುವ ಮೂಲಕ ಅಬ್ಬರದ ಪ್ರಚಾರ ಕೈಗೊಂಡರು.

ಶಾಸಕ ವಿಶ್ವಾಸ್ ವೈದ್ಯ ಜೊತೆಗೂಡಿ ಕ್ಷೇತ್ರದ ವಿವಿಧೆಡೆ ಪ್ರಚಾರ ಕೈಗೊಂಡ ಬಳಿಕ ಸಂಜೆ ಸವದತ್ತಿ ಪಟ್ಟಣದಲ್ಲಿ ಮೆರವಣಿಗೆ ಮೂಲಕ ಅಬ್ಬರದ ರ್ಯಾಲಿ ನಡೆಸಿದರು. ಎಪಿಎಂಸಿ ಬಳಿಯಿಂದ ಆರಂಭಗೊಂಡ ರ್ಯಾಲಿ ಹಳೇ ಬಸ್ ನಿಲ್ದಾಣ, ಆನಿ ಅಗಸಿ ಮಾರ್ಗದಲ್ಲಿ ಸಾಗಿ ಗಾಂಧಿ ಚೌಕದಲ್ಲಿ ಮುಕ್ತಾಯಗೊಂಡಿತು. ಸುಮಾರು ನಾಲ್ಕು ಕಿಲೋಮೀಟರ್ ವರೆಗೂ ಸಾಗಿದ ಮೆರವಣಿಯಲ್ಲಿ 20 ಸಾವಿರಕ್ಕೂ ಅಧಿಕ ಕಾರ್ಯಕರ್ತರು

ಹಾಜರಿದ್ದರು.

ಈ ವೇಳೆ ಮಾತನಾಡಿದ ಸಚಿವರು, 2014ರಲ್ಲಿ ನಾನು ಸೋತ ಕ್ಷೇತ್ರದಲ್ಲೆ ಇಂದು ಗೆಲುವಿನ ವಾತಾವರಣವಿದೆ. ಸವದತ್ತಿಯಲ್ಲಿ ಸಿಕ್ಕ ಜನರ ಬೆಂಬಲವನ್ನು ನೋಡಿದರೆ ಕನಿಷ್ಟ 30 ರಿಂದ 40 ಸಾವಿರ ಮತಗಳ ಮುನ್ನಡೆ ಸಿಗುವುದು ಗ್ಯಾರಂಟಿ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಜಿಲ್ಲೆಗೆ ಅನ್ಯಾಯ ಎಸಗಿದ ವ್ಯಕ್ತಿ ಬಿಜೆಪಿ ಅಭ್ಯರ್ಥಿ ಆಗಿದ್ದಾರೆ. ಬಿಜೆಪಿ ದೇಶದ ಜನರಿಗೆ ಅನ್ಯಾಯ ಮಾಡಿದೆ. ಮೋದಿಯಿಂದ ದೇಶ ಹಾಳಾಗುತ್ತಿದ್ದು, ಜನರು ಬದಲಾವಣೆ ಬಯಸಿದ್ದಾರೆ. ದಿನ ಬಳಕೆ ವಸ್ತುಗಳು ಗಗನಕ್ಕೇರಿದ್ದು, ಜನರು ಬೇಸತ್ತಿದ್ದಾರೆ. ಬಡವರು ಬಡವರಾಗಿಯೇ ಉಳಿದರೆ ಶ್ರೀಮಂತರು ಶ್ರೀಮಂತರಾಗಿಯೇ ಉಳಿದಿದ್ದಾರೆ ಎಂದು ಸಚಿವರು ಆರೋಪಿಸಿದರು.

ಬಿಜೆಪಿ ಅಭ್ಯರ್ಥಿ ಶೆಟ್ಟರ್ ಸ್ವಾರ್ಥ ರಾಜಕಾರಣಿ, ಮುಖ್ಯಮಂತ್ರಿ ಆದ ನಂತರ ಸಚಿವನಾದ ಮೊದಲ ವ್ಯಕ್ತಿ. ಇಂಥ ಸ್ವಾರ್ಥ ರಾಜಕಾರಣಿ ನಮಗೆ ಬೇಡ. ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಅವರನ್ನು ಬೆಂಬಲಿಸಿ, ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಶ್ರಮಿಸಲಿದ್ದಾನೆ. ನಿಮ್ಮ ಧ್ವನಿಯಾಗಿ ದೆಹಲಿಯಲ್ಲಿ ಕೆಲಸ ಮಾಡಲಿದ್ದಾನೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಮೃಣಾಲ್ ಗೆದ್ದರೆ ಸವದತ್ತಿ ಕ್ಷೇತ್ರದ ಅಭಿವೃದ್ಧಿಗೆ ಮತ್ತಷ್ಟು ಅನುಕೂಲ ಆಗಲಿದೆ. ಸವದತ್ತಿ ಕ್ಷೇತ್ರದ ಜನರು ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚು ಬೆಂಬಲ ನೀಡಬೇಕು. ಮೃಣಾಲ್ ಹೆಬ್ಬಾಳಕರ್ ಗೆಲುವಿಗೆ ಸಹಕರಿಸಬೇಕು ಎಂದು ಶಾಸಕ ವಿಶ್ವಾಸ್ ವೈದ್ಯ ಮನವಿ ಮಾಡಿದರು.

ಇದಕ್ಕೂ ಮೊದಲು ಜಕಬಾಳ, ಕಿಟದಾಳ, ಅರಟಗಲ್, ಬೆನಕಟ್ಟಿ, ತೆಗ್ಗಿಹಾಳ ಹಾಗೂ ಬಸರಗಿ ಗ್ರಾಮಗಳಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಪ್ರಚಾರ ನಡೆಸಿದರು.

ಈ ವೇಳೆ ಮಾಜಿ ಪುರಸಭೆ ಅಧ್ಯಕ್ಷ ಶೇಖರ್, ಬಿಎನ್ ಪ್ರಭುನವರ್, ಉಮೇಶ್ ಬಾಳಿ, ಮಹಾರಾಜ ಗೌಡರು, ಬಿಎನ್ ಹತ್ತಿಗೇರಿ, ಅಮೀರ್ ಗುರಿನಾಯ್ಕ್, ಶಿವಾನಂದ ಪಟ್ಟಣಶೆಟ್ಟಿ, ಉಮೇಶ್ ಗೌಡರು, ನಾಸೀಬ್ ಬಾಗೋಜಿಕೊಪ್ಪ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ಬೆಳಗಾವಿ-ಚಿಕ್ಕೋಡಿಯಲ್ಲಿ 'ಕೆ' ಗೆಲುವು ನಿಶ್ಚಿತ: ನಾಗರಾಜ ಯಾದವ

ಬೆಳಗಾವಿ: ಕಾಂಗ್ರೆಸ್ ಅಭ್ಯರ್ಥಿಗಳಾದ ಪ್ರಿಯಂಕಾ, ಮೃಣಾಲ್ ಅಪಾರ ಜ್ಞಾನ ಹೊಂದಿದವರು ಎಂಬ ಕಾರಣಕ್ಕಾಗಿ ಟಿಕೆಟ್ ನೀಡಲಾಗಿದೆ. ಅದರಲ್ಲೂ ಸಚಿವ ಸತೀಶ ಜಾರಕಿಹೊಳಿ ಜಿಲ್ಲೆಗೆ ಅಪಾರ ಕೊಡುಗೆ ನೀಡಿದ ಪರಿಣಾಮ ಎರಡು ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ಆಗಲಿದೆ ಎಂದು ಎಂ-ಎಲ್‌ಸಿ ನಾಗರಾಜ ಯಾದವ ವಿಶ್ವಾಸ ವ್ಯಕ್ತಪಡಿಸಿದರು.

ಇಲ್ಲಿನ ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ಶನಿವಾರ ಸುದ್ಧಿಗೋಷ್ಠಿಯಲ್ಲಿ ಮಾತನಾಡಿ, ಅಭಿವೃದ್ಧಿ ಹರಿಕಾರ ಸತೀಶ ಜಾರಕಿಹೊಳಿ ಅವರು, ನೀರಾವರಿ ಯೋಜನೆ, ಶೈಕ್ಷಣಿಕವಾಗಿ ಬೆಳಗಾವಿಯನ್ನು ಅಭಿವೃದ್ಧಿ ಮಾಡಿದ್ದಾರೆ. ಭಾಷಾ , ಧರ್ಮ ರಾಜಕಾರಣ ಮಾಡದೇ ಎಲ್ಲಾ ಸಮುದಾಯದರನ್ನು ಒಂದೇ ವೇದಿಕೆ ತೆಗೆದುಕೊಂಡುವ ಹೋಗುವ ಪ್ರಯತ್ನ ಮಾಡಿದ್ದಾರೆ. ಹೀಗಾಗಿ ಚಿಕ್ಕೋಡಿ ಭಾಗದಲ್ಲಿ ಸಹೋದರಿ ಪ್ರಿಯಂಕಾ ಅಮೋಘ ಗೆಲುವು ನಿಶ್ಚಿತ ಎಂದರು.

ರಾಜ್ಯದಲ್ಲಿ ಮೂರು ವರ್ಷ, ಕೇಂದ್ರದಲ್ಲಿ 10 ವರ್ಷಗಳ ಅಧಿಕಾರ ಅವಧಿಯಲ್ಲಿ ಬೆಳಗಾವಿಗೆ ಏನು ಕೊಡುಗೆ ನೀಡದೆ ಎಂಬುವುದನ್ನು ಬಿಜೆಪಿ ಆತ್ಮಾಲೋಕನ ಮಾಡಿಕೊಳ್ಳಬೇಕು. ಜನತೆಗೆ ಕೊಟ್ಟ ಭರವಸೆಯನ್ನು ಈಡೇರಿಸದ ಅನುಭವ ರಾಜಕಾರಣಿಯಾಗಿರುವ ಪ್ರಧಾನಿ ಮೋದಿ ಇದರ ಬಗ್ಗೆ ರಿಪೋರ್ಟ್ ಕಾರ್ಡ್ ನೀಡಬೇಕು. ಧರ್ಮದ ಹೆಸರಿನಲ್ಲಿ ರಾಜ-

ಕಾರಣ ಮಾಡುವುದು ಸರಿಯಲ್ಲ, ನಾವು ಶ್ರೀರಾಮನ ಭಕ್ತರೆ..! ಆದರೆ, ಬಿಜೆಪಿ ರಾಮನ ಹೆಸರು ಇಟ್ಟುಕೊಂಡು ಕೋಮುವಾದವನ್ನೇ ಪ್ರತಿಪಾಧನೆ ಮಾಡಿ ಮುಸ್ಲಿಂ ಸಮುದಾಯವನ್ನು ದೂರ ತಳ್ಳುವ ಯತ್ನ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ಬಿಜೆಪಿ 10 ವರ್ಷದ ಅಧಿಕಾರ ಅವಧಿಯಲ್ಲಿ ಪ್ರಧಾನಿ ಮೋದಿಯವರು ದೇಶದ ಮೇಲೆ ಮೂರರಷ್ಟು ಸಾಲ ಮಾಡಿದ್ದಾರೆ. ಯುವಕರಿಗೆ ಕನಿಷ್ಠ ಉದ್ಯೋಗ ನೀಡಲ್ಲ, ರೈತರ ಸಾಲ ಮನ್ನಾ ಮಾಡಲಿಲ್ಲ.

ಬಂಡವಾಳ ಶಾಹಿ ಸಾಲ ಮನ್ನಾ ಮಾಡಿ ದೇಶದಲ್ಲಿ ಜಾತಿಗಳ ನಡುವೆ ವಿಷ ಬಿಜ ಬೀತ್ತುವ ಯತ್ನ ನಡೆಸುತ್ತಿದ್ದಾರೆ.

ಬೆಳಗಾವಿ ಶೆಟ್ಟರ ಕೊಡುಗೆ ಶೂನ್ಯ : ಬಡವರಿಗೆ ಸಹಾಯ ಮಾಡಿದರೆ ಸರ್ಕಾರ ದಿವಾಳಿ ಹೇಗೆ ಆಗುತ್ತದೆ. ಜನತ ಹಿತ ಕಾಪಾಡುತ್ತಿದೆ ಕಾಂಗ್ರೆಸ್ ಪಕ್ಷ, ಈ ಯೋಜನೆಗಳು ಲಕ್ಷಾಂತರ ಜನರಿಗೆ ಆಸರೆ ಆಗಿದೆ.

ಅಧಿಕಾರ ದಾಹ, ಅವಕಾಶ ರಾಜಕಾರಣಿ ಶೆಟ್ಟರ ಅವರು ಬೆಳಗಾವಿಗೆ ಬಂದಿದ್ದಾರೆ. ಬೆಳಗಾವಿಗೆ ಶೆಟ್ಟರ ಕೊಡುಗೆ ಶೂನ್ಯ ಎಂದು ತಿವಿದರು.

ಪ್ರೊ. ಎಂ.ವಿ ರಾಜೀವ್ ಗೌಡ ಮಾತನಾಡಿ, ಚುನಾವಣಾ ಆಯೋಗವು ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಿದೆ. ಪ್ರಧಾನಿ ಮೋದಿಯವರು ಕೋಮುವಾದಿ ಭಾಷಣ, ಸಂವಿಧಾನ ವಿರೋಧಿ ಹೇಳಿಕೆ ನೀಡಿದರು ಯಾವುದೇ ಕ್ರಮ ತೆಗೆದುಕೊಂಡಿಲ್ಲ. ಚುನಾವಣಾ ಆಯೋಗ, ಸರ್ಕಾರೇತರ ಸಂಸ್ಥೆಗಳ ಬಿಜೆಪಿ ಕೈಗೊಂಬೆಯಾಗಿದ್ದಾರೆ ಎಂದು ಕೇಂದ್ರ ಸರ್ಕಾರ ವಿರುದ್ಧ ವಾಗ್ದಾಳಿ ನಡೆಸಿದರು.

ಮೋದಿ ಆಡಳಿತ ಅವಧಿಯಲ್ಲಿ

ಪ್ರಜ್ವಲ್ ರೇವಣ್ಣ ವಿಚಾರದಲ್ಲಿ ದೇವೇಗೌಡರು ಸಾಕಷ್ಟು ನೊಂದಿದ್ದಾರೆ: ನಿಖಿಲ್ ಕುಮಾರಸ್ವಾಮಿ

ಬೆಂಗಳೂರು: ಪ್ರಜ್ವಲ್ ರೇವಣ್ಣ ವಿಚಾರದಲ್ಲಿ ಮಾಜಿ ಪ್ರಧಾನಿ ದೇವೇಗೌಡರು ಸಾಕಷ್ಟು ನೊಂದಿದ್ದಾರೆ ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದರು.

ಹೆಚ್.ಡಿ.ದೇವೇಗೌಡರನ್ನ ಪದ್ಮನಾಭನಗರ ನಿವಾಸದಲ್ಲಿ ಭೇಟಿಯಾಗಿ ನಿಖಿಲ್ ಆರೋಗ್ಯ ವಿಚಾರಿಸಿದರು. ಬಳಿಕ ಮಾತನಾಡಿದ ಅವರು, ಈ ವಿಷಯವನ್ನು ರಾಜಕೀಯವಾಗಿ ಜನರಿಗೆ ತಪ್ಪು ಸಂದೇಶ ಕೊಡುವ ಕೆಲಸ ಆಗ್ತಿದೆ ಎಂದು ಬೇಸರ ಹೊರಹಾಕಿದರು.

ಕುಮಾರಸ್ವಾಮಿ, ದೇವೇಗೌಡರು ಹಲವಾರು ವರ್ಷಗಳಿಂದ ರಾಜ-ಕೀಯದಲ್ಲಿ ಇದ್ದಾರೆ. ವಿಶೇಷವಾಗಿ ದೇವೇಗೌಡರ ವೈಯಕ್ತಿಕ ಬದುಕು ತೆರೆದ ಪುಸ್ತಕ. ಅದರಲ್ಲಿ ಮುಚ್ಚುಮರೆ ಇಲ್ಲ. ದೇವೇಗೌಡರಾಗಲಿ, ಅಜ್ಜಿ ಚೆನ್ನಮ್ಮ ಅವರಾಗಲಿ ನಮ್ಮಂತ ಯುವಕರಿಗೆ ಸ್ಫೂರ್ತಿ. ದಂಪತಿ ಯಾವ ರೀತಿ ಬಾಳಿ ಬದುಕಬೇಕು ಅನ್ನೋದಕ್ಕೆ ಅವರಿಗಿಂತ ಉದಾಹರಣೆ ಯಾರು ನನಗೆ ಕಾಣೋದಿಲ್ಲ ಎಂದರು.

ಕೈ ಜೋಡಿಸಿ ಮನವಿ ಮಾಡ್ತೀನಿ. ದೇವೇಗೌಡರಿಗೆ 91, 92 ವರ್ಷ ಈಗ. ಸಹಜವಾಗಿ ಇಂತಹ ವಿಷಯ ಕೇಳಿದ ಮೇಲೆ ದೇವೇಗೌಡರ ಮೇಲೆ ಯಾವ ರೀತಿ ಪರಿಣಾಮ ಆಗಿರುತ್ತೆ, ಅಘಾತವಾಗಿರುತ್ತೆ ಅಂತ ಯಾರು ಊಹೆ ಮಾಡಲು ಸಾಧ್ಯವಿಲ್ಲ. ಇವತ್ತು ಕೂಡಾ ಬೆಳಗ್ಗೆ 5:30 ಕ್ಕೆ ದೇವಸ್ಥಾನ ಹೋಗಿ ಬಂದೆ. ಈಗ ವಿಶ್ರಾಂತಿ ಪಡೆಯುತ್ತಿದ್ದೇನೆ ಅಂತಾ ಹೇಳಿದರು. ದೇವೇಗೌಡರು ಸಾಕಷ್ಟು ನೊಂದಿದ್ದಾರೆ. ಇಡೀ ರಾಜ್ಯದ ಜನತೆಗೂ ಕೂಡಾ ದೇವೇಗೌಡ ಮನಸಿನ ಮೇಲೆ ಯಾವ ರೀತಿ ಪರಿಣಾಮ ಬೀರಿರಬೇಕು ಅಂತಾ ಎಲ್ಲರಿಗೂ ಗೊತ್ತಿರುವ ವಿಷಯ. ದೇವೇಗೌಡರು ಮತ್ತು ನಮ್ಮ ಅಜ್ಜಿ ಸಾಕಷ್ಟು ನೋವಿನಲ್ಲಿ ಇದ್ದಾರೆ ಎಂದರು.

ವೀಡಿಯೋ ಲೀಕ್ ಆಗಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ನನಗೆ ಬಹಳ ದುಃಖ ತಂದ ವಿಷಯ ವೀಡಿಯೋ ಬ್ಲರ್ ಮಾಡದೇ ಇರೋದು. ನಾನು ಆ ವೀಡಿಯೋ ನೋಡೋ ಧೈರ್ಯ ಮಾಡಲಿಲ್ಲ. ನಮ್ಮ ಸುತ್ತಮುತ್ತ ಇರುವವರು ಹೇಳಿದರು. ಇಂತಹ ವೀಡಿಯೋ ಇರೋ ಸಮಯದಲ್ಲಿ ಬ್ಲರ್ ಮಾಡ್ತಾರೆ. ಆದರೆ ಪಾಪ ಆ ಹೆಣ್ಣುಮಕ್ಕಳನ್ನು ಸೋಶಿಯಲ್ ಮೀಡಿಯಾದಲ್ಲಿ ಮುಖ ಕಾಣೋ ರೀತಿ ಅದನ್ನು ತೋರಿಸಿದ್ದಾರೆ. ವೀಡಿಯೋ ಬಿಡುಗಡೆ ಬಗ್ಗೆಯೂ ಹೆಚ್ಚಿನ ತನಿಖೆ ಆಗಬೇಕು ಎಂದು ಆಗ್ರಹಿಸಿದರು.

ರೈಲ್ವೆ ಲೆವೆಲ್ ಕ್ರಾಸಿಂಗ್ ತಾಂತ್ರಿಕ ಪರಿಶೀಲನೆ; ವಾಹನ ಸಂಚಾರಕ್ಕೆ ಪರ್ಯಾಯ ಮಾರ್ಗ ಸೂಚನೆ

ಶಿವಮೊಗ್ಗ: ಶಿವಮೊಗ್ಗ-ಕುಂಸಿ ಮಧ್ಯೆ ಬರುವ ರೈಲ್ವೆ ಲೆ.ಕ್ರಾ. ನಂ.:50 ರಲ್ಲಿ ತಾಂತ್ರಿಕ ಪರಿಶೀಲನೆಗಾಗಿ ಮೇ 05 ರ ಬೆಳಗ್ಗೆ 08.00 ರಿಂದ ಮೇ 06 ರ ಸಂಜೆ 6.00 ರವರೆಗೆ ಗೇಟ್ ಮುಚ್ಚುವುದರಿಂದ ವಾಹನಗಳ ಸಂಚಾರಕ್ಕೆ ತಾತ್ಕಾಲಿಕವಾಗಿ ಪರ್ಯಾಯ ಮಾರ್ಗವನ್ನು ಕಲ್ಪಿಸಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಆದೇಶ ನೀಡಿರುತ್ತಾರೆ.

ಶಿವಮೊಗ್ಗ ನಗರ-ಕುಂಸಿ ಸ್ಟೇಷನ್ ಮಧ್ಯೆ ಬರುವ ರೈಲ್ವೆ ಲೆ.ಕ್ರಾ.ನಂ.50 ರ ಬದಲಿ ಮಾರ್ಗವಾಗಿ ಎಲ್.ಸಿ. 52 ರ ಕಾಶಿಪುರ ಮೂಲಕ ಉಷಾ ನರ್ಸಿಂಗ್ ಹೋಂ, ಜೈಲ್ ಸರ್ಕಲ್, ವಿನೋಬನಗರ, ಪೊಲೀಸ್ ಚೌಕಿ ಮುಖಾಂತರ ಲಘು ಮತ್ತು ಭಾರಿ ಗಾತ್ರದ ವಾಹನಗಳು ಮತ್ತು ಪಿ&ಟಿ ಕಾಲೋನಿಯಿಂದ ಕೆಳ ರಸ್ತೆಯ ಮುಖಾಂತರ ಲಘು ವಾಹನಗಳು ಸಂಚರಿಸುವುದು.

ಎಲ್.ಸಿ-49ರ ಸವಳಂಗ ರಸ್ತೆ ಮೂಲಕ ಉಷಾ ನರ್ಸಿಂಗ್ ಹೋಂ-ಜೈಲ್ ಸರ್ಕಲ್-ವಿನೋಬನಗರ ಪೊಲೀಸ್ ಚೌಕಿ ಮೂಲಕ ಸಂಚರಿಸುವಂತೆ ಜಿಲ್ಲಾಧಿಕಾರಿಗಳು ಆದೇಶದಲ್ಲಿ ಸೂಚಿಸಿರುತ್ತಾರೆ.

ಜಗದೀಶ ಶೆಟ್ಟರ್ ಪರ ಮತ ಬೇಟೆ ಮುಂದುವರೆಸಿದ ಶಾಸಕ ಬಾಲಚಂದ್ರ ಜಾರಕಿಹೊಳಿ

ಮೂಡಲಗಿ: ಲೋಕಸಭಾ ಚುನಾವಣೆಯ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ಅವರ ಪರ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಮತಬೇಟೆ ಮುಂದುವರೆಸಿದ್ದಾರೆ.

ಶನಿವಾರದಂದು ಮೂಡಲಗಿ ತಾಲ್ಲೂಕಿನ ಅರಭಾವಿ, ಕಲ್ಲೋಳ್ಳಿ, ನಾಗನೂರ, ಮೂಡಲಗಿ ಪಟ್ಟಣಗಳಿಗೆ ತೆರಳಿ ಮತ ಯಾಚಿಸಿದ ಅವರು, ಮೇ. 7 ರಂದು ನಡೆಯುವ ಚುನಾವಣೆಯಲ್ಲಿ ಜಗದೀಶ್ ಶೆಟ್ಟರ್ ಅವರನ್ನು ಪ್ರಚಂಡ ಬಹುಮತದಿಂದ ಆಯ್ಕೆ ಮಾಡುವಂತೆ ಮನವಿ ಮಾಡಿಕೊಂಡರು.

ದೇಶದ ಭವಿಷ್ಯದ ದೃಷ್ಟಿಯಿಂದ ಬಿಜೆಪಿಯು ಉತ್ತಮ ಆಯ್ಕೆಯಾಗಿದೆ. ಪ್ರಧಾನಿ ನರೇಂದ್ರ ಮೋದಿಯವರಿಂದಾಗಿ ಭಾರತವು ವಿಶ್ವಮಾನ್ಯವಾಗಿದೆ. ಶಕ್ತಿ ಶಾಲಿ ಭಾರತವಾಗುತ್ತಿದೆ. ವಿಶ್ವದಲ್ಲೇ ಪ್ರಗತಿಶೀಲ ರಾಷ್ಟ್ರವಾಗಿ ಹೊರಹೊಮ್ಮುತ್ತಿರುವ ಈ ದೇಶಕ್ಕೆ ಮತ್ತೊಮ್ಮೆ ಮೋದಿ ಅವರು ಪ್ರಧಾನಮಂತ್ರಿ ಆಗಬೇಕು. ಇಡೀ ಈ ದೇಶದ ನಾಗರೀಕರ ಆಶಯವಾಗಿದೆ. ಈ ದಿಸೆಯಲ್ಲಿ ಯಾವ ಆಮಿಷಗಳಿಗೂ ಬಲಿಯಾಗದೇ ಸಮರ್ಥ, ಸ್ಥಿರ ಸರ್ಕಾರಕ್ಕಾಗಿ ಬಿಜೆಪಿಯನ್ನು ಬೆಂಬಲಿಸುವಂತೆ ಅವರು ಕೋರಿದರು.

ಜಗದೀಶ್ ಶೆಟ್ಟರ ಅವರಿಗೆ ಮತ ನೀಡಿದರೆ ಅದು ಮೋದಿ ಅವರಿಗೆ ನೀಡಿದಂತೆ. ಶೆಟ್ಟರ ಅವರನ್ನು ಆಯ್ಕೆ ಮಾಡಿದರೆ ನಮ್ಮ ಬೆಳಗಾವಿ ಜಿಲ್ಲೆಗೆ ಮತ್ತಷ್ಟು ಅನುಕೂಲವಾಗಲಿದೆ. ಈ ರಾಜ್ಯದ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿರುವ ಅವರಿಗೆ ನಾವೆಲ್ಲರೂ ಮತ ನೀಡುವ ಮೂಲಕ ಆಶೀರ್ವಾದ ಮಾಡುವಂತೆ ಮನವಿ ಮಾಡಿಕೊಂಡರು.

ಕಳೆದ ವಿಧಾನ ಸಭೆ ಚುನಾವಣೆಯಲ್ಲಿ ನಾನು ಪ್ರಚಾರಕ್ಕೆ ಹೋಗಲಿಲ್ಲ. ಆದ್ರೂ ನಂಗೆ ರಾಜ್ಯದಲ್ಲಿಯೇ 4 ನೇ ಸ್ಥಾನದ ಮುನ್ನಡೇ ಮತಗಳಿಂದ ಆಯ್ಕೆ ಮಾಡಿರುವ ನಿಮ್ಮಗಳ ಋಣಭಾರ ನನ್ನ ಮೇಲಿದೆ. ಈಗ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ಪರ ಪ್ರಚಾರದಲ್ಲಿ ತೊಡಗಿದ್ದೇನೆ. ಅತೀ ಹೆಚ್ಚಿನ ಮತಗಳನ್ನು ಶೆಟ್ಟರ ಅವರ ಶೇ. ನಂ 2 ರ ಕಮಲ ಗುರುತಿನ ಚಿತ್ರಕ್ಕೆ ನೀಡಿ ಆರಿಸಿ ತರುವಂತೆ ಅವರು ತಿಳಿಸಿದರು.

ಕೆಲವರು ಈ ಚುನಾವಣೆಯಲ್ಲಿ ಮತದಾರರಿಗೆ ಕೆಲವು ಆಮಿಷಗಳನ್ನು ಒಡ್ಡುತ್ತಿದ್ದಾರೆ. ಬಹಳವೆಂದರೆ ಮೇ. 7 ರತನಕ ನಿಮ್ಮನ್ನು ಕಾಳಜಿ ಮಾಡಬಹುದು. ಚುನಾವಣೆ ಮುಗಿದ ಬಳಿಕ ನಿಮ್ಮನ್ನು ಕಡೆಗಣಿಸಿ ಹೋಗುತ್ತಾರೆ. ನಾನು ನಿಮ್ಮ ಕಷ್ಟ- ಸುಖದಲ್ಲಿ ನಿರಂತರವಾಗಿ ಭಾಗಿಯಾಗುತ್ತಿದ್ದೇನೆ. ನಿಮ್ಮ ಸಮಸ್ಯೆಗಳನ್ನು ನಾನು ಪರಿಹರಿಸುತ್ತೇನೆ. ಭೀಕರ ಬರಗಾಲದ ಮಧ್ಯೆಯೂ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಈಗಾಗಲೇ ಹಳ್ಳ ಮತ್ತು ಕಿನಾಲಗಳಿಗೆ ನೀರನ್ನು ಹರಿಸಿದ್ದೇನೆ. ರಾಜ್ಯದಾದ್ಯಂತ ಕುಡಿಯಲು ನೀರು ಸಿಗುತ್ತಿಲ್ಲ. ಮುಂದೊಂದು ದಿನ ನೀರು ಬಂಗಾರಕ್ಕಿಂತ ಹೆಚ್ಚು ಬೆಲೆ ಸಿಗಲಿದೆ. ನೀರಿಗೆ ಮಹತ್ವ ಎಷ್ಟಿದೇ ಎಂಬುದು ನಿಮಗೆ ಈಗಾಗಲೇ ಅರ್ಥವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅರಭಾವಿ ಮಂಡಲ ಬಿಜೆಪಿ ಅಧ್ಯಕ್ಷ ಮಹಾದೇವ ಶೆಕ್ಕಿ, ಜನ ಪ್ರತಿನಿಧಿಗಳು, ವಿವಿಧ ಸಮಾಜಗಳ ಮುಖಂಡರು, ಬಿಜೆಪಿ ಪದಾಧಿಕಾ-ರಿಗಳು ಉಪಸ್ಥಿತರಿದ್ದರು.

ಮುನವಳ್ಳಿಯಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಭರ್ಜರಿ ರೋಡ್ ಶೋ

ಬೆಳಗಾವಿ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ಗ್ಯಾರಂಟಿ: ಸಚಿವೆ

ಮುನವಳ್ಳಿ: ಸವದತ್ತಿ ವಿಧಾನಸಭಾ ಕ್ಷೇತ್ರದ ಮುನವಳ್ಳಿ ಪಟ್ಟಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಭರ್ಜರಿ ರೋಡ್ ಶೋ ನಡೆಸಿದರು. ಸುಮಾರು ಮೂರು ಕಿಲೋಮೀಟರ್ ಸಾಗಿದ ರೋಡ್ ಶೋನಲ್ಲಿ ಸಾವಿರಾರು ಕಾರ್ಯಕರ್ತರು ಹೆಜ್ಜೆ ಹಾಕಿದರು.

ಸಾಯಿ ಮಂದಿರದಲ್ಲಿ ಪೂಜೆ ಸಲ್ಲಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಪಟ್ಟಣದ ಪ್ರಮುಖ ರಸ್ತೆಯ ಮೂಲಕ ಬಜಾರ್ ರೋಡ್ ನಲ್ಲಿ ಸಂಚರಿಸಿ ಮಾರುತಿ ಮಂದಿರದ ಬಳಿ ರ್ಯಾಲಿ ಮುಕ್ತಾಯಗೊಂಡಿತು. ಸುಮಾರು 10 ಸಾವಿರಕ್ಕೂ ಅಧಿಕ ಮಂದಿ ಉರಿ ಬಿಸಿಲನ್ನು ಲೆಕ್ಕಿಸದೆ ಸುಮಾರು 3 ಗಂಟೆಗಳ ಕಾಲ ನಡೆದ

ರ್ಯಾಲಿಯಲ್ಲಿ ಭಾಗವಹಿಸಿದ್ದರು.

ಈ ವೇಳೆ ಮಾತನಾಡಿದ ಸಚಿವರು, ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಇರುವವರೆಗೂ ಪಂಚ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ. ವಿರೋಧ ಪಕ್ಷದವರು ಸುಖಾಸುಮ್ಮನೆ ಅಪಪ್ರಚಾರದಲ್ಲಿ ತೊಡಗಿದ್ದಾರೆ. ಬೆಳಗಾವಿ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷ ಬೆಂಬಲಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ನವರ ಕೈ ಬಲಪಡಿಸಬೇಕು ಎಂದು ಕರೆ ನೀಡಿದರು.

ಎಲ್ಲರೂ ತಪ್ಪದೇ ಮತದಾನ ಮಾಡಿ, ಸವದತ್ತಿ ವಿಧಾನಸಭಾ ಕ್ಷೇತ್ರದಿಂದ ಅತಿ ಹೆಚ್ಚು ಮತಗಳ ಮುನ್ನಡೆಯನ್ನು ನಿರೀಕ್ಷಿಸಲಾಗಿದೆ. ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಗೆದ್ದರೆ ಶಾಸಕ ವಿಶ್ವಾಸ್ ವೈದ್ಯ ಅವರ ಮಾರ್ಗದರ್ಶನದಲ್ಲಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಲಿದ್ದಾನೆ. ಜನರ ಹುರುಪನ್ನು ನೋಡಿದರೆ, ಇದು ನನ್ನ ಪಾಲಿಗೆ ಮತಯಾಚನೆ ರ್ಯಾಲಿ ಥರ ಕಾಣುತ್ತಿಲ್ಲ. ವಿಜಯೋತ್ಸವದ ರ್ಯಾಲಿ ಎನಿಸುತ್ತಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಈ ವೇಳೆ ಸವದತ್ತಿ ಶಾಸಕ ವಿಶ್ವಾಸ್ ವೈದ್ಯ, ರವಿ ಯಲಿಗಾರ್, ಉಮೇಶ್ ಬಾಳಿ, ಎಂ.ಆರ್. ಗೋಪಶೆಟ್ಟಿ, ಸಿ.ಬಿ.ಬಾಳಿ, ಸುಮಾ ಯಲಿಗಾರ್, ಸಿ.ಬಿ.ಗೋರನಕೊಳ್ಳ, ಶ್ರೀಕಾಂತ್ ನೇಗಿನಹಾಳ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: 6 ನೇ ತರಗತಿಯ ಪ್ರವೇಶಕ್ಕೆ ಮೇ 19 ರಂದು ಪರೀಕ್ಷೆ

ಧಾರವಾಡ: ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ 6 ನೇ ತರಗತಿಯ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳಿಗೆ ಮೇ 19, 2024 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ಪರೀಕ್ಷೆಯನ್ನು ಧಾರವಾಡದ ಅಂಜುಮನ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜನಲ್ಲಿ ನಡೆಸಲಾಗುವುದು.

ಅರ್ಜಿ ಸಲ್ಲಿಸಿದ ಎಲ್ಲಾ ವಿದ್ಯಾರ್ಥಿಗಳು ಮೇ 13 ರಿಂದ ಮೇ 17, 2024 ರೊಳಗಾಗಿ ಹುಬ್ಬಳ್ಳಿ ಅಂಚಟಗೇರಿಯ ಅಲ್ಪಸಂಖ್ಯಾತರ ಡಾ॥ ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆ ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಪರೀಕ್ಷಾ ಪ್ರವೇಶ ಪತ್ರವನ್ನು ಪಡೆದುಕೊಂಡು ಮೇ 19, 2024 ರಂದು ಬೆಳಿಗ್ಗೆ 10 ಘಂಟೆಯೊಳಗಾಗಿ ಪರೀಕ್ಷಾ ಕೇಂದ್ರದಲ್ಲಿ ಹಾಜರಾಗುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಗೋಪಾಲ ಎಚ್. ಲಮಾಣಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

8ರಂದು ಆಧಾರ್ ಹೌಸಿಂಗ್ ಫೈನಾನ್ಸ್ ಅಮಿಟೆಡ್ ಐಪಿಒ

ಹುಬ್ಬಳ್ಳಿ: ಆಧಾರ್ ಹೌಸಿಂಗ್ ಫೈನಾನ್ಸ್ ಲಿಮಿಟೆಡ್ ತನ್ನ ಈಕ್ವಿಟಿ ಷೇರುಗಳ ಆರಂಭಿಕ ಸಾರ್ವಜನಿಕ ಕೊಡುಗೆಯನ್ನು ಬುಧವಾರ, ಮೇ 8,2024 ರಂದು ತೆರೆಯಲು ಪ್ರಸ್ತಾಪಿಸಿದೆ.

ಆರಂಭಿಕ ಸಾರ್ವಜನಿಕ ಕೊಡುಗೆಯು ಒಟ್ಟು 10,000 ದಶಲಕ್ಷ ರೂಪಾಯಿಗಳ ಈಕ್ವಿಟಿ ಷೇರುಗಳ ಹೊಸ ಸಂಚಿಕೆ ಮತ್ತು ಬಿಸಿಪಿ ಟಾಪ್ಕೋ ಗಿಖಖ ಪ್ರೈವೇಟ್ ಲಿಮಿಟೆಡ್ ನಿಂದ ಒಟ್ಟು 20,000 ದಶಲಕ್ಷ ರೂಪಾಯಿಗಳವರೆಗೆ ಈಕ್ವಿಟಿ ಷೇರುಗಳ ಮಾರಾಟದ ಪ್ರಸ್ತಾಪವನ್ನು ಒಳಗೊಂಡಿದೆ.

ಹೊಸ ಸಂಚಿಕೆಗಳಿಂದ ಬರುವ ನಿವ್ವಳ ಆದಾಯವನ್ನು (i) ಮುಂದಿನ ಸಾಲಕ್ಕಾಗಿ ಭವಿಷ್ಯದ ಬಂಡವಾಳದ ಅವಶ್ಯಕತೆಗಳನ್ನು ಪೂರೈಸಲು; ಮತ್ತು (ii) ಸಾಮಾನ್ಯ ಸಾಂಸ್ಥಿಕ ಉದ್ದೇಶಗಳಿಗಾಗಿ ಬಳಸಿಕೊಳ್ಳಲು ಕಂಪನಿಯು ಪ್ರಸ್ತಾಪಿಸಿದೆ. ಈಕ್ವಿಟಿ ಷೇರುಗಳನ್ನು ಏಪ್ರಿಲ್ 30,2024 ದಿನಾಂಕದ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ಬೆಂಗಳೂರಿನಲ್ಲಿರುವ ಕರ್ನಾಟಕ ಕಂಪನಿಗಳ ರಿಜಿಸ್ಟ್ರಾರ್ ಅವ-ರಿಗೆ ಸಲ್ಲಿಸಲಾಗಿದೆ. ಆರ್ಎಚ್ಪಿ ಮೂಲಕ ನೀಡಲಾಗುವ ಈಕ್ವಿಟಿ ಷೇರುಗಳನ್ನು ಬಿಎಸ್ಇ ಲಿಮಿಟೆಡ್ (ಬಿಎಸ್ಇ) ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ (ಎನ್ಎಸ್ಇ) ಜೊತೆಗೆ ಬಿಎಸ್ಇ, "ಸ್ಟಾಕ್ ಎಕ್ಸ್ಚೇಂಜ್" ಸ್ಟಾಕ್ ಎಕ್ಸ್ಚೇಂಜ್ಗಳಲ್ಲಿ ಪಟ್ಟಿ ಮಾಡಲು ಪ್ರಸ್ತಾಪಿಸಲಾಗಿದೆ. ಪ್ರಸ್ತಾವನೆಗೆ ಗೊತ್ತುಪಡಿಸಿದ ಸ್ಟಾಕ್ ಎಕ್ಸ್ಚೇಂಜ್ ಎನ್-ಎಸ್ಇ ಆಗಿರುತ್ತದೆ.

ಈ ಸಂದರ್ಭದಲ್ಲಿ ಆಧಾರ್ ಹೌಸಿಂಗ್ ಫೈನಾನ್ಸ್ ಲಿಮಿಟೆಡ್ ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ್ ಮಾತನಾಡಿ, "ವ್ಯಕ್ತಿಗಳು ಮತ್ತು ಕುಟುಂಬಗಳನ್ನು ಅವರ ಸ್ವಂತ ಮನೆಗಳ ಕೀಲಿಗಳಿಂದ ಸಬಲೀಕರಣಗೊಳಿಸುವ ನಮ್ಮ ಪ್ರಯಾಣದಲ್ಲಿ ಇದು ಮಹತ್ವದ ಮೈಲಿಗಲ್ಲಾಗಿದೆ. 'ಫರ್ ಬನೇಗಾ, ತೋ ದೇಶ ಬನೇಗಾ' ಎಂಬ ನಿಜವಾದ ಅರ್ಥ-ದೊಂದಿಗೆ, ನಾವು ರಾಷ್ಟ್ರ ನಿರ್ಮಾಣದ ಮತ್ತು ಬಲವಾದ ಸಮುದಾಯಗಳಿಗೆ ಅಡಿಪಾಯ ಹಾಕುವ ಜವಾಬ್ದಾರಿಯನ್ನು ಸ್ವೀಕರಿಸುತ್ತೇವೆ ಎಂದು ಹೇಳಿದರು.

ಮಣಿಪುರ ರಾಜ್ಯದ ಬಾಲಕಿ ಬೆಳಗಾವಿಯಲ್ಲಿ ರಕ್ಷಣೆ

ಬೆಳಗಾವಿ: ಮಣಿಪುರ ರಾಜ್ಯದ ಬಾಲಕಿಯು ಕಳೆದ ಡಿಸೆಂಬರನಲ್ಲಿ ತನ್ನ ತಾಯಿಗೆ ತಿಳಿಸಿ ಕೆಲಸಕ್ಕೆ ಹೋಗುತ್ತೆನೆಂದು ಹೈದರಾಬಾದಗೆ ಬಂದು ಅಲ್ಲಿ ಕೆಲಸ ಪ್ರಾರಂಭಿಸುತ್ತಾರೆ. ಅಲ್ಲಿ ಸರಿಯಾಗಿ ಸಂಬಳ ಸಿಗದೆ ಇರುವ ಕಾರಣದಿಂದ ಕೇರಳಾದ ಕೋಚ್ಚಿನ್ ನಗರದ ಹೋಟೆಲ್ ಒಂದರಲ್ಲಿ ಕೆಲಸಕ್ಕೆ ಸೇರಿಕೋಳುತ್ತಾಳೆ. ಅಲ್ಲಿಯು ಕೂಡಾ ಸರಿಯಾಗಿ ಸಂಬಳ ಸಿಗದೇ ಇರುವುದರಿಂದ ಕಳೆದ ಮಾರ್ಚ್ 18 ರಂದು ಬೆಳಗಾವಿ ನಗರದ ದೇಶಿ ಧಾಬಾದಲ್ಲಿ ಕೆಲಸ ಮಾಡಿಕೊಂಡು ಇರುತ್ತಾಳೆ.

ಜೊತೆಯಲ್ಲಿ ಒರ್ವ ಮಹಿಳಾ ತೃತೀಯ ಲಿಂಗಿ ಮಹಿಳೆಯು ಸಹ ಜೊತೆಯಲ್ಲಿ ಇದ್ದು, ಸುಮಾರು ದಿನಗಳು ಕುಟುಂಬದ ಸಂಪರ್ಕಕ್ಕೆ ಬಾರದೇ ಇರುವುದರಿಂದ ತಾಯಿಯು ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಿಸುತ್ತಾರೆ. ಅದರಂತೆ

ಪಾಲಕರ ದೂರಿನ್ವಯ ಮಣಿಪುರ ಸರ್ಕಾರದ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ (ಮಕ್ಕಳ ರಕ್ಷಣೆ) ರವರು 7 ಜನ ಅಧಿಕಾರಿಗಳ ಒಂದು ತಂಡ ರಚಿಸಿ ಬಾಲಕಿ ರಕ್ಷಣೆ ಮಾಡಲು ತಿಳಿಸಿರುತ್ತಾರೆ.

ಅದರಂದೆ ಜಾಡು ಹಿಡಿದ ತಂಡವು ಹೈದ್ರಬಾದ್, ಬೆಂಗಳೂರು ಮೂಲಕ ಬೆಳಗಾವಿಗೆ ಬೇಟಿ ನೀಡಿ, ಮೇ.3 ರಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಬೆಳಗಾವಿ, ಪೋಲಿಸ್ ಇಲಾಖೆ ಸಹಕಾರದೊಂದಿಗೆ ಬಾಲಕಿ-ಯನ್ನು ತಿಲಕವಾಡಿ ಪೋಲಿಸ್ ಠಾಣೆ ವ್ಯಾಪ್ತಿಯಲ್ಲಿ ರಕ್ಷಣೆ ಮಾಡಲಾಗಿರುತ್ತದೆ. ತಿಲಕವಾಡಿ ಪೋಲಿಸ್ ಠಾಣೆಗೆ ಭೇಟಿ ನೀಡಿ ಸಂಬಂಧಿಸಿದ ಅಧಿಕಾರಿಗಳ ಜೊತೆಗೆ ಚರ್ಚಿಸಿ ಬಾಲಕಿಯ ಕು-ರಿತು ಸಂಪೂರ್ಣವಾದ ಮಾಹಿತಿಯನ್ನು ಪಡೆದುಕೊಂಡು, ಬಾಲಕಿಯನ್ನು ತಿಲಕವಾ

ನಗನೂರ ದಾಸೋಹ ಮೂರ್ತಿಯ ರಥೋತ್ಸವ

ಕೆಂಭಾವಿ: ಪಟ್ಟಣ ಸಮೀಪದ ನಗನೂರ ಗ್ರಾಮದ ಮಹಾದಾಸೋಹಿ ಶರಣಬಸವೇಶ್ವರರ 177ನೇ ಜಾತ್ರಾ ಮಹೋತ್ಸವದ ಅಂಗವಾಗಿ ಶುಕ್ರವಾರ ಸಂಜೆ ಮಹಾ ರಥೋತ್ಸವವು ಭಕ್ತರ ಜಯ ಘೋಷಗಳ ಮಧ್ಯೆ ಅದ್ದೂರಿಯಾಗಿ ನೆರವೇರಿತು.

ದಾಸೋಹ ಮಠದ ಪೀಠಾಧಿಪತಿ ಶರಣಪ್ಪ ಶರಣರ ನೇತೃತ್ವದಲ್ಲಿ ಸಂಪ್ರದಾಯದಂತೆ ಬೆಳಿಗ್ಗೆಯಿಂದಲೆ ವಿವಧ ಧಾರ್ಮಿಕ ವಿಧಿವಿಧಾನಗಳು ಜರುಗಿದವು. ಸಂಜೆ 6:45ಕ್ಕೆ ಶೃಂಗಾರಗೊಂಡಿದ್ದ ರಥದಲ್ಲಿ ಶರಣಬಸವೇಶ್ವರರ ಮೂರ್ತಿಯನ್ನಿಟ್ಟು ರಥಕ್ಕೆ ಕಳಸಾರೋಹಣವಾಗುತ್ತಿದ್ದಂತೆ

ಭಕ್ತರ ಜಯಕಾರದೊಂದಿಗೆ ಪೀಠಾಧಿಪತಿ ಶರಣಪ್ಪ ಶರಣರು ರಥ-ೋತ್ಸವಕ್ಕೆ ಚಾಲನೆ ನೀಡಿದರು.

ಮಧ್ಯಾಹ್ನ ಮೂರು ಗಂಟೆಯಿಂದಲೆ ದೇವಸ್ಥಾನದ ಪ್ರಾಂಗಣದಲ್ಲಿ ಜಮಾವಣೆಗೊಂಡ ಮಕ್ಕಳು, ವೃದ್ಧರು, ಮಹಿಳೆಯರಾಧಿಯಾಗಿ ಭಕ್ತಜನ ರಥೋತ್ಸವವನ್ನು ಕಣ್ತುಂಬಿಕೊಂಡರು.

ರಥೋತ್ಸವದ ನಂತರ ಸರದಿಯಲ್ಲಿ ನಿಂತು ದೇವರ ದರ್ಶನ ಪಡೆದರು. ತೇರಿಗೆ ಹಿಡುಗಾಯಿಗಳನ್ನು ಒಡೆದು ಹರಕೆ ತೀರಿಸಿದರು. ಸುತ್ತಮುತ್ತಲಿನ ಅನೇಕ ಗ್ರಾಮಗಳ ಭಕ್ತರು ತಂಡೋಪತಂಡವಾಗಿ ಆಗಮಿಸುತ್ತಿದ್ದ ದೃಶ್ಯ ಸರ್ವೇಸಾಮನ್ಯವಾಗಿತ್ತು.

ರಾಸುಗಳ ಜಾತ್ರೆಗೆ ಚಾಲನೆ: ಜಿಲ್ಲೆ ಹೊರ ಜಿಲ್ಲೆ ಸೇರಿದಂತೆ ನಾಡಿನಾದ್ಯಂತದ ವಿವಿಧ ತಳಿಗಳು ಸೇರುವ ಐತಿಹಾಸಿಕ ರಾಸುಗಳ ಜಾತ್ರೆ ಹತ್ತು ದಿನಗಳವರೆಗೆ ನಗನೂರು ಶರಣಬಸವೇಶ್ವರರ ಜಾತ್ರಾ ಮಹೋತ್ಸವದ ಅಂಗವಾಗಿ ನಡೆಯುತ್ತಿದ್ದು, ಶುಕ್ರವಾರ ಬೃಹತ್ ರಾಸುಗಳ ಸಂತೆಗೆ ದಾಸೋಹ ಮಠದ ಪೀಠಾಧಿಪತಿ ಶರಣಪ್ಪ ಶರಣ-ರು ಚಾಲನೆ ನೀಡಿದರು.

ಲೋಕಸಭಾ ಚುನಾವಣೆ: ಮೇ.6 ಮತ್ತು 7 ರಂದು ಕೆಲ ಮಾರ್ಗಗಳ ಬಸ್ ಸಾರಿಗೆ ತಾತ್ಕಾಲಿಕವಾಗಿ ರದ್ದು

ಬೆಳಗಾವಿ: ಲೋಕಸಭಾ ಚುನಾವಣೆ ನಡೆಯುತ್ತಿರುವ ಹಿನ್ನೇಲೆಯಲ್ಲಿ ಮೇ.7 ರಂದು ಬೆಳಗಾವಿ ವಿಭಾಗದ ವತಿಯಿಂದ ಚುನಾವಣಾ ಕಾರ್ಯಕ್ಕೆ 200 ವಾಹನಗಳನ್ನು ಪೂರೈಸಬೇಕಾಗಿರುತ್ತದೆ. ಆದ್ದ-ರಿಂದ ವಿಭಾಗದ ಬೆಳಗಾವಿ, ಬೈಲಹೊಂಗಲ ಮತ್ತು ಖಾನಾಪೂರ ಬಸ್ ನಿಲ್ದಾಣಗಳಿಂದ ಕಾರ್ಯಾಚರಣೆಯಾಗುವ ಕೆಲ ಮಾರ್ಗಗಳ ಸಾರಿಗೆಗಳನ್ನು ಅನಿವಾರ್ಯ ಕಾರಣಗಳಿಂದಾಗಿ ಮೇ.6 ಮತ್ತು 7 ರಂದು ಬೆಳಗಾವಿಯಿಂದ ಧಾರವಾಡ, ವಿಜಯಪೂರ, ಗೋಕಾಕ, ಕುಕಡೊಳ್ಳಿ, ಪಾಶ್ಚಾಪೂರ, ಪನಗುತ್ತಿ, ಬೆಟಗೇರಿ, ಶಿವಾಪೂರ ತೋರಾಳಿ, ಬೋಗೂರು, ವೀರಾಪೂರ ,ಬೈಲಹೊಂಗಲ, ನಂದಿಹಳ್ಳಿ,ಬಡಸ, ಕೊಲ್ಹಾಪೂರ, ಹುಬ್ಬಳ್ಳಿ,ಸಂಕೇಶ್ವರ, ರಾಮನಗರ, ಹಳಿಯಾಳ, ಶಿರಶಿ ,ದಾಂಡೆಲಿ, ಪಣಜಿ, ಬಿಡಿ, ಖಾನಾಪೂರ ಬಸ್‌ಗಳನ್ನು ತಾತ್ಕಾಲಿಕವಾಗಿ ರದ್ದುಪಡಿಸಲಾಗಿದೆ.

ಸಿಬಿಟಿಯಿಂದ, ಸಂತಿಬಸ್ತವಾಡ, ಮಾರ್ಕಂಢೆಯ ನಗರ, ಕರಡಿಗುದ್ದಿ, ಹಂದಿಗನೂರ, ಸುಳಗಾ, ಕೊಳಿಕೊಪ್ಪ, ಅನಗೋಳ, ವಡಗಾವ, ರಾಮತೀರ್ಥನಗರ, ಆರ್.ಸಿ.ಯು. ಕಾರ್ಲೇ, ರಣಕುಂಡೆ, ಹ.ಬಸ್ತವಾಡ, ಕೆ,ಕೆ,ಕೋಪ್ಪ ಸುಳೆಬಾವಿ, ಬಸರಿಕಟ್ಟಿ, ಕೆಂಚಾನಟ್ಟಿ, ರಾಜಹಂಸ ಗಡ, ದೇಸೂರ, ಯಳ್ಳೂರ ರದ್ದುಪಡಿಸಲಾಗಿದೆ.

ಬೈಲಹೊಂಗಲದಿಂದ ಬೆಳಗಾವಿ, ಕಲಬುರಗಿ, ಉಳವಿ, ವೆಂಗುರ್ಲಾ, ಧಾರವಾಡ, ಯರಗಟ್ಟಿ, ಮುನವಳ್ಳಿ ನೇಸರಗಿ, ಅಂಕಲಗಿ, ಕಿತ್ತೂರು, ಅಲ್ನಾವರ, ನಾಯಿತೇಗೂರ, ಇನಾಮಂಗಲ, ಗಜಮನಾಳ, ಮತ್ತಿಕೊಪ್ಪ ಕರಡಿಗುದ್ದಿ, ತುರಮುರಿ, ಇಟಗಿ ಕ್ರಾಸ್, ಸವಟಗಿ ಖಾನಾಪೂರದಿಂದ ಹಳಿಯಾಳ, ರಾಮನಗರ, ಮಡಗಾವ, ಶಿರಸಿ, ದಾಂಡೇಲಿ, ಪಣಜಿ, ಅಲ್ನಾವರ, ಬಿಡಿ, ಬೆಳಗಾವಿ, ಹಲಸಿ. ಮುಗಳಿಹಾಳ ಮಾರ್ಗಗಳಲ್ಲಿ ಕೆಲವೊಂದು ಬಸ್‌ಗಳನ್ನು ತಾತ್ಕಾಲಿಕವಾಗಿ ರದ್ದುಪಡಿಸಲಾಗಿದೆ.

ಸಸಾರ್ವಜನಿಕ ಪ್ರಯಾಣಿಕರು ಸಾರಿಗೆ ಸಂಸ್ಥೆಯೊಂದಿಗೆ ಸಹಕರಿಸಿ ಲಭ್ಯವಿರುವ ಸಾರಿಗೆ ಸೌಲಭ್ಯವನ್ನು ಪಡೆದು ಪ್ರಯಾಣಿಸುವಂತೆ ಬೆಳಗಾವಿ ವಾಕರಸಾ ಸಂಸ್ಥೆಯ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲಿ ತಿಳಿಸಿದ್ದಾರೆ.

ವ್ಯಕ್ತಿ ನಾಪತ್ತೆ

ಬೆಳಗಾವಿ: ಸಿಪಾಯ ಅಭಿಜಿತ ರಾಜಾರಾಮ ಪಾಟೀಲ ಇವರು ಏ.28 ರಂದು ಎಮ್. ಎಲ್.ಐ.ಆರ್.ಸಿ ಕ್ಯಾಂಪದಿಂದ ಎಲ್ಲಿಯೋ ಹೋಗಿದ್ದು ಕಾಣಿಯಾಗಿದ್ದಾನೆ ಎಂದು ಸುಬೇದಾರ ಸಚೀನ ನಾನಾಸಾಹೇಬ ಬೋಸಲೆ ಇವರು ಪೊಲೀಸ್ ಠಾಣೆಗೆ ಹಾಜರಾಗಿ ದೂರು ದಾಖಲಿಸಿದ್ದಾರೆ.

ಕಾಣೆಯಾದ ವ್ಯಕ್ತಿ ವಿವರ: ವಯಸ್ಸು 24 ಇದ್ದು, 171 ಸೇಂ.ಮೀಟರ್ ಎತ್ತರ, ಉದ್ದ ಮುಖ, ದುಂಡು ಮೂಗು, ಗೋದಿಕೆಂಪು ಮೈಬಣ್ಣ ಎಡಗಡೆ ಹಣೆಯ ಮೇಲೆ ಹಳೆಯ ಗಾಯದ ಗುರುತು ಇದ್ದು, ಟ್ರ್ಯಾಕ್ ಸೂಟ್ ಧರಿಸಿರುತ್ತಾನೆ.

ಸರದಿ ಕಾಣೆಯಾದ ವ್ಯಕ್ಯಿಯ ಮಾಹಿತಿ ಸಿಕ್ಕಲ್ಲಿ ಪೊಲೀಸ್ ಇನ್ಸಪೆಕ್ಟರ್ ಕ್ಯಂಪ್ ಪೊಲೀಸ್ ಠಾಣೆ ದೂರವಾಣಿ: 08312405234 ಅಥವಾ 08312405278 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಕ್ಯಾಂಪ್ ಪೊಲೀಸ್ ಠಾಣೆಯ ಪೊಲೀಸ್ ಸಬ್‌ಇನ್ಸಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಲೆಕ್ಟ್ರಾನಿಕ್ ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣಗಳು ಮಾರ್ಗಸೂಚಿ ಪಾಲಿಸಲು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಸೂಚನೆ

ಬೆಳಗಾವಿ: ಲೋಕಸಭಾ ಚುನಾವಣೆ-2024ರ ಅಂಗವಾಗಿ ಮೇ 7, 2024ರಂದು ಮತದಾನ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಮೇ 6 ಹಾಗೂ ಮೇ 7 ರಂದು ಯಾವುದೇ ಅಭ್ಯರ್ಥಿಗಳು/ಸಂಸ್ಥೆಗಳು ಅಥವಾ ಯಾವುದೇ ವ್ಯಕ್ತಿಯು ದಿನಪತ್ರಿಕೆಗಳಲ್ಲಿ ಯಾವುದೇ ರೀತಿಯ ಚುನಾವಣಾ ಜಾಹೀರಾತು ಪ್ರಕಟಿಸಬೇಕಾದರೆ ಸದರಿ ಜಾಹೀರಾತಿಗೆ ಜಿಲ್ಲಾಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿಯ(ಎಂಸಿಎಂಸಿ) ಕಡೆಯಿಂದ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಚುನಾವಣಾ ಜಾಹೀರಾತು ಪ್ರಕಟಿಸಲು ಬಯಸುವ ಅಭ್ಯರ್ಥಿಗಳು ಮೇ 6 ಹಾಗೂ ಮೇ 7 ರಂದು ಮುದ್ರಣ ಮಾಧ್ಯಮಗಳಲ್ಲಿ ಜಾಹೀರಾತು ಪ್ರಕಟಿಸಬೇಕಾದರೆ ಸದರಿ ಜಾಹೀರಾತಿನ ಎರಡು ಸ್ವಯಂ ದೃಢೀಕೃತ ಪ್ರತಿಗಳೊಂದಿಗೆ ನಿಗದಿತ ಅರ್ಜಿ ನಮೂನೆಯಲ್ಲಿ ಮೇ 5, 2024ರೊಳಗೆ ಜಿಲ್ಲಾ ಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿ(ಎಂಸಿಎಂಸಿ)ಗೆ ಅರ್ಜಿ ಸಲ್ಲಿಸಬೇಕು.

ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಜಾಹೀರಾತುಗಳನ್ನು ಪ್ರಕಟಿಸಲು ಜಿಲ್ಲಾಮಟ್ಟದ ಎಂಸಿಎಂಸಿ ಕಡೆಯಿಂದ ಪೂರ್ವಾನುಮತಿ ಪಡೆಯದ ಅಭ್ಯರ್ಥಿಗಳ ಜಾಹೀರಾತುಗಳನ್ನು ಸ್ಥಳೀಯ, ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರೊಮಟ್ಟದ ದಿನಪತ್ರಿಕೆಗಳು ಪ್ರಕಟಿಸಬಾರದು ಎಂದು ಚುನಾವಣಾ ಆಯೋಗ ತಿಳಿಸಿದೆ.

ಪೂರ್ವಾನುಮತಿಗೆ ಅರ್ಜಿ ಲಭ್ಯ:

ಮೇ 6 ಹಾಗೂ ಮೇ 7 ರಂದು ಮುದ್ರಣ ಮಾಧ್ಯಮದಲ್ಲಿ ಪ್ರಕಟಿಸಲು ಪೂರ್ವಾನುಮತಿ ಪಡೆಯಲು ಅಗತ್ಯವಿರುವ ನಿಗದಿತ ನಮೂನೆಯ ಅರ್ಜಿ ನಮೂನೆಗಳು ವಾರ್ತಾ ಮತ್ತು

ಸಾರ್ವಜನಿಕ ಸಂಪರ್ಕ ಇಲಾಖೆಯ 'ವಾರ್ತಾಭವನ' ನ್ಯಾಯಾಲಯ ಆವರಣ, ಬೆಳಗಾವಿ- ಈ ಕಚೇರಿಯಿಂದ ಪಡೆಯಬಹುದು.

ಎಲೆಕ್ಟ್ರಾನಿಕ್ ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣಗಳಿಗೆ ಮಾರ್ಗಸೂಚಿ:

ಮತದಾನಕ್ಕೆ ನಿಗದಿಪಡಿಸಿರುವ ಅವಧಿ ಕೊನೆಗೊಳ್ಳುವ 48 ಗಂಟೆಗಳ ಮುಂಚೆ ಎಲೆಕ್ಟ್ರಾನಿಕ್ ಮಾಧ್ಯಮಗಳಲ್ಲಿ (ಟಿವಿ, ಸಿನಿಮಾಟೋಗ್ರಾಫ್, ದೃಶ್ಯಶ್ರವಣ) ಚುನಾವಣಾ ಸಂಬಂಧಿ ವಿಷಯಗಳ ಪ್ರಸಾರವನ್ನು ಪ್ರಜಾಪ್ರತಿನಿಧಿ ಕಾಯ್ದೆ-1951 ರ ಕಲಂ 126 ರ ಪ್ರಕಾರ ನಿಷೇಧಿಸಲಾಗಿದೆ.

ಚುನಾವಣಾ ಸಂಬಂಧಿ ವಿಷಯ ಎಂದರೆ ಚುನಾವಣಾ ಫಲಿತಾಂಶದ ಮೇಲೆ ಪ್ರಭಾವ ಅಥವಾ ಪರಿಣಾಮ ಬೀರುವಂತಹ ವಿಷಯಗಳಾಗಿರುತ್ತವೆ.

ಈ ಕಾಯ್ದೆಯನ್ನು ಉಲ್ಲಂಘಿಸುವವ-ರಿಗೆ ಎರಡು ವರ್ಷಗಳವರೆಗೆ ವಿಸ್ತ-ರಿಸಬಹುದಾದ ಕಾರಾಗೃಹ ಶಿಕ್ಷೆ ಅಥ-ವಾ ದಂಡ ಅಥವಾ ದಂಡ ಮತ್ತು ಶಿಕ್ಷೆ ಎರಡನ್ನೂ ವಿಧಿಸಬಹುದಾಗಿದೆ.

ಟಿವಿ/ರೇಡಿಯೋ/ಕೇಬಲ್ ನೆಟವರ್ಕ ಮತ್ತು ಎಲ್ಲ ಡಿಜಿಟಲ್ ಮಾಧ್ಯಮಗಳು ಮತದಾನಪೂರ್ವ 48 ಗಂಟೆಗಳ ಅವಧಿಯಲ್ಲಿ ಚುನಾವಣೆ ಸಂಬಂಧಿ ವಿಷಯಗಳು ಪ್ರಸಾರ ಮಾಡದಂತೆ ಕ್ರಮವಹಿಸಬೇಕು.

ಕಾರ್ಯ ಕ್ರಮದಲ್ಲಿ ಭಾಗವಹಿಸುವವರು (ಪ್ಯಾನಲಿಸ್ಟ್) ಯಾವುದೇ ಪಕ್ಷ ಅಥ-ವಾ ಅಭ್ಯರ್ಥಿಗಳ ಪರ ಅಥವಾ ವಿರೋಧವಾಗಿರುವ ಅಭಿಪ್ರಾಯಗಳು/ ಮನವಿಗಳು ಮತ್ತು ಚುನಾವಣಾ ಫಲಿತಾಂಶದ ಮೇಲೆ ಪ್ರಭಾವ ಬೀರುವಂತಹ ವಿಷಯಗಳನ್ನು ಕೂಡ ಪ್ರಸಾರ ಮಾಡಕೂಡದು.

ನಿಗದಿತ 48 ಗಂಟೆಗಳ ಅವಧಿಯಲ್ಲಿ ಓಪಿನಿಯನ್ ಪೋಲ್ ಫಲಿತಾಂಶ ಪ್ರಕಟಿಸುವುದು. ಚರ್ಚೆ ಅಥವಾ ವಿಶ್ಲೇಷಣೆ ಏರ್ಪಡಿಸುವುದು. ಅದೇ ರೀತಿ ಚುನಾವಣೋತ್ತರ ಸಮೀಕ್ಷೆಗಳನ್ನು ಪ್ರಸಾರ ಮಾಡುವುದು ಕೂಡ ಪ್ರಜಾಪ್ರತಿನಿಧಿ ಕಾಯ್ದೆ-1951 ರ ಕಲಂ 126 ರ ವ್ಯಾಪ್ತಿಯಲ್ಲಿ ಬರುತ್ತದೆ.

ಲೋಕಸಭಾ ಚುನಾವಣೆ-2024ರ ಅಂಗವಾಗಿ ಮೇ 7 ರಂದು ಮತದಾನ ನಡೆಯಲಿದೆ. ಆದ್ದ-ರಿಂದ ಎಲ್ಲ ಎಲೆಕ್ಟ್ರಾನಿಕ್ ಹಾಗೂ ಡಿಜಿಟಲ್ ಮಾಧ್ಯಮಗಳು ಮೇಲ್ಕಂಡ ನಿರ್ದೇಶನಗಳನ್ನು ಪಾಲಿಸಬೇಕು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಬಿಜೆಪಿಗೆ ತಕ್ಕ ಪಾಠ ಕಲಿಸಿಲು ಕಾಂಗ್ರೆಸ್ ಗೆ ಬೆಂಬಲಿಸಿ: ರಾಜ್ಯ ಸಂಚಾಲಕ ಕೇಶವಮೂರ್ತಿ ಮನವಿ

ಬೆಳಗಾವಿ: 10 ವರ್ಷಗಳಿಂದ ನಿರಂತರವಾಗಿ ಬಿಜೆಪಿ ಸರ್ಕಾರದಿಂದ ನಮ್ಮ ಸಮಾಜದ ಹೋರಾಟಕ್ಕೆ ಬೆಲೆ ಸಿಕ್ಕಿಲ್ಲ, ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರ ಬಂದರೇ ನಮ್ಮ ಸಮುದಾಯಕ್ಕೆ ನ್ಯಾಯ ಒದಗಿಸುವ ಭರವಸೆ ನೀಡಿದ್ದಾರೆ. ಹೀಗಾಗಿ ರಾಜ್ಯಾದ್ಯಂತ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸೋಣ ಎಂದು ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿ ಹೋರಾಟ ಸಮಿತಿ ರಾಜ್ಯ ಸಂಚಾಲಕರಾದ್ ಕೇಶವಮೂರ್ತಿ ಕರೆ ನೀಡಿದರು.

ಸಾಹಿತ್ಯ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಗಾವಿ ದಕ್ಷಿಣ ಭಾರತದಲ್ಲಿ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಹೋರಾಟವು ನಿರಂತರವಾಗಿ ಹೋರಾಟ ಮಾಡುತ್ತಿದ್ದು ಅದರ ಪ್ರಯುಕ್ತ ನ್ಯಾಯಮೂರ್ತಿ ಉಷಾ ಮೇರಾ ಸಮಿತಿಯು ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ವರ್ಗಿಕರಣ ಮಾಡುವದಕ್ಕೆ ಆಯಾ ರಾಜ್ಯಗಳಿಂದ ವರ್ಗಿಕರಣ ಮಾಡಿಸಲು ಸಂಸತನಲ್ಲಿ ಅನುಮೋದನೆ ಪಡೆದುಕೊಳ್ಳುವ ಜಾರಿ ಮಾಡಬಹುದೆಂದು ಕೇಂದ್ರ ಸರ್ಕಾರಕ್ಕೆ ಸಿಫಾರಸ್ಸು ಮಾಡಿತ್ತು ಅದನ್ನು ಬಗಹರಿಸಲು ಕ್ರಮ ತಗೆದುಕೊಳ್ಳಲು ಕಾಂಗ್ರೆಸ್ ಭರವಸೆ ನೀಡಿದ್ದು ಅದಕ್ಕಾಗಿ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಜಾರಿ ಹೋರಾಟ ಸಮಿತಿ ಕಾಂಗ್ರೆಸ್ ಬೆಂಬಲಿಸಬೇಕೆಂದು ಜನಾಂಗಕ್ಕೆ ಮನವಿ ಮಾಡುತ್ತೇವೆ ಮತ್ತು ಮಾದಿಗ ದಂಡೋರದ್ ರಾಷ್ಟ್ರೀಯ ಅಧ್ಯಕ್ಷರಾದ್ ಬಂದ್ ಕೃಷ್ಣ ಮಾದಿಗ ಬಿಜೆಪಿ ಬೆಂಬಲ ಹೇಳಿಕೆ ನೀಡಿರುವುದು ಖಂಡನೀಯ, ಸಮುದಾಯದವರು ಬಿಜೆಪಿಯನ್ನು ಬೆಂಬಲಿಸಬಾರದೆಂದು ಎಂದು ಕರೆ ಕೊಟ್ಟರು.

ಕರ್ನಾಟಕ ಮಾದಿಗ ಸಂಘಟನೆಗಳ ಒಕ್ಕೂಟವು ಮಾದಿಗ ಸಮುದಾಯದ ಮತದಾರರಲ್ಲಿ ಮನವಿ ಮಾಡಿಕೊಳ್ಳುವದನೆಂದರೆ ಒಳ ಮೀಸಲಾತಿಯನ್ನು ಜಾರಿ ಮಾಡದೆ ಉನ್ನತ ಶಿಕ್ಷಣದಲ್ಲಿ ಮೀಸಲಾತಿಯನ್ನು ರದ್ದುಪಡಿಸಿ ಖಾಸಗಿಕರಣದಲ್ಲಿ ಮೀಸಲಾತಿಯನ್ನು ಜಾರಿ ಮಾಡದೇ ಸಂವಿಧಾನವನ್ನು ಬದಲು ಮಾಡಲು ಹೊರಟಿರುವ ಬಿಜೆಪಿ ಪಕ್ಷಕ್ಕೆ ಮತ ಹಾಕದೆ ತಕ್ಕ ಪಠ ಕಲಿಸಿ ಬೇಕಾಗಿದೆ ಎಂದು ಆಗ್ರಹಿಸಿದರು. ಪತ್ರಿಕಾಗೋಷ್ಠಿಯಲ್ಲಿ ಬೆಳಗಾವಿ ಜಿಲ್ಲಾಧ್ಯಕ್ಷ ಗೋಪಿ ಬಳ್ಳಾರಿ, ಬಸವರಾಜ್ ಅರವೊಳಿ, ಯಲ್ಲಪ್ಪ ಹುಡಲಿ, ಶಂಕರ್ ದೊಡಮನಿ, ಪೆದ್ದನ್ನ ಅನಾಯಪುರ, ಸಂದೀಪ ಕುಲಕರ್ಣಿ ಸೇರಿದಂತೆ ಅನೇಕರು ಇದ್ದರು.

ನಾಟಕ ಪ್ರದರ್ಶಿಸುತ್ತಿದ್ದ ವೇಳೆ ಹೃದಯಾಘಾತದಿಂದ ಕಲಾವಿದ ಸಾವು

ಬೆಂಗಳೂರು: ನಾಟಕದಲ್ಲಿ ಅಭಿನಯಿಸುತ್ತಿರುವಾಗಲೇ ವೇದಿಕೆಯಲ್ಲೇ ಕುಸಿದು ಬಿದ್ದು ಕಲಾವಿದರೊಬ್ಬರು ಮೃತಪಟ್ಟಿದ್ದಾರೆ. ಯಲಹಂಕದ ಸಾತನೂರು ಗ್ರಾಮದಲ್ಲಿ ನಡೆದಿದೆ.

ಎನ್.ಮುನಿಕೆಂಪಣ್ಣ (72) ಮೃತರು. ಇವರು ಯಲಹಂಕದ ಸಾತನೂರು ಗ್ರಾಮದಲ್ಲಿ 'ಕುರುಕ್ಷೇತ್ರ' ನಾಟಕ ಪ್ರದರ್ಶಿಸುತ್ತಿದ್ದ ವೇಳೆ ನಿಧನ ಹೊಂದಿದ್ದಾರೆ. ಹೃದಯಾಘಾತದಿಂದ ಮೃತಪಟ್ಟ ಮುನಿಕೆಂಪಣ್ಣ ಅವರ ಅಂತ್ಯ ಸಂಸ್ಕಾರ ಅವರ ಹುಟ್ಟೂರು ಅರದೇಶನಹಳ್ಳಿಯಲ್ಲಿ ನಡೆಯಲಿದೆ.

ಕುರುಕ್ಷೇತ್ರ' ನಾಟಕದಲ್ಲಿ ಮುನಿಕೆಂಪಣ್ಣ ಅವರು ಶಕುನಿ ಪಾತ್ರ ನಿರ್ವಹಿಸುತ್ತಿದ್ದರು. ಮಧ್ಯರಾತ್ರಿಯವರೆಗೂ ಅದ್ಭುತ ಪ್ರದರ್ಶನ ನೀಡಿದ ಅವರು ಒಂದು ಗಂಟೆಯ ವೇಳೆಗೆ ಇದ್ದಕ್ಕಿದ್ದಂತೆ ವೇದಿಕೆ ಮೇಲೆಯೇ ಕುಸಿದು ಬಿದ್ದು ಪ್ರಾಣ ಬಿಟ್ಟಿದ್ದಾರೆ. ಸದ್ಯ ಅವರು ಕುಸಿದು ಬೀಳುತ್ತಿರುವ ದೃಶ್ಯ ಮೊಬೈಲ್‌ನಲ್ಲಿ ಸೆರೆಯಾಗಿದೆ. ಹಿಂದೆ ಉಪನ್ಯಾಸಕರಾಗಿದ್ದ ಮುನಿಕೆಂಪಣ್ಣ ಅವರು ನಾಟಕದಲ್ಲಿ ಅಪಾರ ಆಸಕ್ತಿ ಹೊಂದಿದ್ದು, ಆಗಾಗ ವೇಷ ಹಚ್ಚುತ್ತಿರುತ್ತಾರೆ. ದೇವನಹಳ್ಳಿಯಲ್ಲಿ ನಡೆದ 28ನೇ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದರು.

ಜಗದೀಶ್ ಶೆಟ್ಟರ್ ಪರ ಮತಯಾಚಿಸಿದ ಮಾಜಿ ಸಚಿವ ಬೈರತಿ ಬಸವರಾಜ

ಬೆಳಗಾವಿ: ಇದು ದೇಶದ ಚುನಾವಣೆ, ನಿಮ್ಮ ಅಮೂಲ್ಯ ಮತ ಜಗದೀಶ್ ಶೆಟ್ಟರ್ ಅವರಿಗೆ ನೀಡುವ ಮೂಲಕ ಮೋದಿಯವರ ಕೈ ಬಲ ಪಡಿಸಬೇಕು ಎಂದು ಮಾಜಿ ಸಚಿವರಾದ ಬೈರತಿ ಬಸವರಾಜ ಅವರು ಕರೆ ನೀಡಿದ್ದಾರೆ.

ಲೋಕಸಭಾ ಚುನಾವಣೆ ಅಂಗವಾಗಿ ಬೆಳಗಾವಿ ಉತ್ತರ ಮತಕ್ಷೇತ್ರದ ಸಮಥ-ರ್ ನಗರದಲ್ಲಿ ಪ್ರಚಾರ ಸಭೆ ನಡೆಸಿ, ಮತಯಾಚನೆ ಮಾಡಲಾಯಿತು. ಈ ವೇಳೆ ಮಾತನಾಡಿದ ಅವರು, ನಾನು ನಗರಾಭಿವೃದ್ಧಿ ಸಚಿನಾಗಿದ್ದಾಗ ಬೆಳಗಾವಿ ಸ್ಮಾರ್ಟ್ ಸಿಟಿ ಯೋಜನೆ ಅಡಿಯಲ್ಲಿ ಬೆಳಗಾವಿ ನಗರಕ್ಕೆ ಸಾಕಷ್ಟು ಕೊಡುಗೆ ಕೊಟ್ಟಿದ್ದೇವೆ. ರಸ್ತೆಗಳ ಉನ್ನತ್ತಿಕರಣ,

ವಿದ್ಯುತ್ ದೀಪಗಳ ಅಳವಡಿಕೆ, ಕುಡಿಯುವ ನೀರಿನ ಯೋಜನೆ ಅನುಷ್ಠಾನ, ಟ್ರಾಫಿಕ್ ಸಮಸ್ಯೆ ಬಗೆಹರಿಸುವುದು ಸೇರಿದಂತೆ ಅನೇಕ ಯೋಜನೆಗಳನ್ನು ಅನುಷ್ಠಾನ ಮಾಡಿದ್ದೇವೆ. ವಿಶೇಷವಾದ ಬಸ್ ನಿಲ್ದಾಣ ಕೂಡ ನಿರ್ಮಾಣ ಮಾಡಿದ್ದೇವೆ ಎಂದು ತಿಳಿಸಿದರು.

ಈ ದೇಶದ ಭದ್ರತೆ ದೃಷ್ಟಿಯಿಂದ, ಈ ದೇಶದ ಅಭಿವೃದ್ಧಿ ದೃಷ್ಟಿಯಿಂದ, ಎಲ್ಲರೂ ನರೇಂದ್ರ ಮೋದಿಯವರನ್ನು ಬೆಂಬಲಿಸಬೇಕು. ಭಾರತೀಯ ಜನತಾ ಪಕ್ಷವನ್ನು ಬೆಂಬಲಿಸಬೇಕು. ವಿಷೇಶವಾಗಿ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರನ್ನು ಬೆಂಬಲಿಸಿಸುವ ಮೂಲಕ ಅವರನ್ನು ಲೋಕಸಭೆಗೆ ಕಳುಹಿಸಬೇಕು. ಮುಂದೆ ಅನೇಕ ಯೋಜನೆಗಳು ಬೆಳಗಾವಿ ಲೋಕಸಭಾ ವ್ಯಾಪ್ತಿಯಲ್ಲಿ ಬರಬೇಕು.

ಜಗದೀಶ್ ಶೆಟ್ಟರ್ ಅವರಿಗೆ ಅನೇಕ ಇಲಾಖೆಯಲ್ಲಿ ಸಚಿವರಾಗಿ ಕೆಲಸ ಮ